ಸಂಪುಟ : 9 ಸಂಚಿಕೆ 158 ಪುಟ : 4 ಬೆಲೆ: 3.00 ರವಿವಾರ ಜುಲೈ 28 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್


# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ





Volume : 9 Issue : 158 Pages : 4 Price : 3.00 Sunday July 28 2024 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಸಚಿವ ಎಚ್.ಕೆ. ಪಾಟೀಲ ಪ್ರವಾಸ



■ವಿಜಯಸಾಕ್ಷಿ ಸುದ್ದಿ, ಗದಗ

ಸಚಿವ ಎಚ್.ಕೆ. ಪಾಟೀಲ ಅವರು. ಜು.28 ರಂದು ಬೆಳಗ್ಗೆ 10 ಗಂಟೆಗೆ ನಗರದ ಡಾ. ಅಂಬೇಡ್ಕರ್ ಭವನದಲ್ಲಿ ನಡೆಯುವ ರಾಜ್ಯ ಕಟ್ಟಡ ಕಟ್ಟುವ ಮತ್ತು ಕಲ್ಲು ಒಡೆಯುವ ಕ್ವಾರಿ ಕಾರ್ಮಿಕರ ಸಂಘದ ಜಿಲ್ಲಾ ಸಮ್ಮೇಳನದಲ್ಲಿ ಭಾಗವಹಿಸುವರು. ಬೆಳಗ್ಗೆ 11 ಗಂಟೆಗೆ ಕೆ. ಎಚ್. ಪಾಟೀಲ ಸಭಾ ಭವನದಲ್ಲಿ ಜರುಗುವ ಪಂಚಮಸಾಲಿ ಸಮಾಜದ ಪ್ರತಿಭಾ ಪುರಸ್ಕಾರ ಹಾಗೂ ವೀರರಾಣಿ ಕಿತ್ತೂರ ಚನ್ನಮ್ಮ ಸಂಘದ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸುವರು. ನಂತರ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಏರ್ಪಡಿಸಿದ ಪತ್ರಿಕಾ ದಿನಾಚರಣೆಯಲ್ಲಿ ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.



ಗದಗ ಜಿಲ್ಲೆಯ ಹಡಪದ ಸಮಾಜ ಸೇವಾ ಸಂಘದ ವತಿಯಿಂದ ನಡೆದ ನಿಜಸುಖಿ ಹಡಪದ ಶ್ರೀ ಅಪ್ಪಣ್ಣ ಅವರ 890ನೇ ಜಯಂತ್ಯುತ್ಸವದಂದು ನೆಡದ ಕಾರ್ಯಕ್ರಮದಲ್ಲಿ ಗದಗ ತಾಲೂಕಿನ ಅಂತೂರ ಬೆಂತೂರ ಗ್ರಾಮದ ಈಶ್ವರಪ್ಪ.ವೀ. ಹಡಪದ ಇವರಿಗೆ ಗದಗ ಜಿಲ್ಲಾ ಹಡಪದ ಸಮಾಜ ಸಂಘದ ವತಿಯಿಂದ " ಕಾಯಕ ರತ್ನ " ಗೌರವ ಪುರಸ್ಕೃತ ಪ್ರಶಸ್ತಿಯನ್ನು ಕರ್ನಾಟಕ ರಾಜ್ಯ ಸರ್ಕಾರದ ಕಾನೂನು ಮತ್ತು ಸಂಸದೀಯ ವ್ಯವಹಾರ ಹಾಗೂ ಪ್ರವಾಸೋದ್ಯಮ ಸಚಿವ ಎಚ್. ಕೆ.ಪಾಟೀಲ ನೀಡಿ ಸನ್ಮಾನಿಸಿದರು.

## ಇಂದು ಪೂರ್ವಭಾವಿ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಗುರು ರಾಘವೇಂದ್ರ ಸ್ವಾಮಿಗಳ 353ನೇ ಆರಾಧನಾ ಮಹೋತ್ಸವ ಆಚರಣೆ ಕುರಿತು ಜು. 28ರ ಭಾನುವಾರ ಸಂಜೆ 6-30ಕ್ಕೆ ನಗರದ ಶ್ರೀ ವೀರನಾರಾಯಣ ದೇವಸ್ಥಾನದಲ್ಲಿ ಭಕ್ತರ ಸಭೆ ಕರೆಯಲಾಗಿದೆ.

ಈ ಸಭೆಯಲ್ಲಿ ಪಾಲ್ಗೊಂಡು ಸಲಹೆ ಸೂಚನೆಗಳನ್ನು ನೀಡುವಂತೆ ಶ್ರೀ ರಾಘವೇಂದ್ರ ಸ್ವಾಮಿ ಉತ್ಸವ ಮಂಡಳಿ ಪ್ರಕಟಣೆ ಕೋರಿದೆ.

# ಈಡೇರಿದ ಬಡ ರೋಗಿಗಳ ಕನಸು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಸಮುದಾಯ ಅರೋಗ್ಯ ಕೇಂದ್ರದಲ್ಲಿ ಜುಲೈ 27ರಂದು ಡಯಾಲಿಸಿಸ್ ಕೇಂದ್ರ ಕಾರ್ಯಾರಂಭಗೊಳ್ಳಲಿದ್ದು, ಆ ಮೂಲಕ ಮೂತ್ರಕೋಶ(ಕಿಡ್ನಿ)ದ ತೊಂದರೆಯಿಂದ ಬಳಲುತ್ತಿರುವ ಬಡ ರೋಗಿಗಳ ಬಹು ಅಗತ್ಯದ ಬೇಡಿಕೆ ಈಡೇರಿದಂತಾಗಿದೆ.

ಅತ್ಯಂತ ಕಷ್ಟದಾಯಕ, ಸೂಕ್ಷ್ಮ ಮತ್ತು ವೆಚ್ಚದಾಯಕವಾದ ಮೂತ್ರಕೋಶದ ತೊಂದರೆಯಿಂದ ಬಳಲುವ ರೋಗಿಗಳಿಗಾಗಿ ಮಾಡುವ ಡಯಾಲಿಸಿಸ್ ಚಿಕಿತ್ಸಾ ಕೇಂದ್ರ ಲಕ್ಷ್ಮೇಶ್ವರದಲ್ಲಿ ಪ್ರಾರಂಭವಾಗಬೇಕು ಎಂಬ ಬೇಡಿಕೆ ಬಡ ರೋಗಿಗಳದ್ದಾಗಿತ್ತು. ಕಿಡ್ನಿ ಸಮಸ್ಯೆಯಿಂದ ಬಳಲುವ ರೋಗಿಗಳಿಗೆ ವಾರದಲ್ಲಿ 2/3 ಬಾರಿ ಡಯಾಲಿಸಿಸ್ ಮಾಡಿಸಲೇಬೇಕಾಗುತ್ತದೆ. ಅದಕ್ಕಾಗಿ ದೂರದ ಹುಬ್ಬಳ್ಳಿ, ಗದುಗಿಗೆ ತೆರಳಬೇಕಿತ್ತು. ಆರ್ಥಿಕ ಸಂಕಷ್ಟದಲ್ಲಿರುವ ಬಡವರ ಪಾಲಿಗೆ ಇದು ಅತ್ಯಂತ ವೆಚ್ಚದಾಯಕವಾಗಿದ್ದು, ಲಕ್ಷ್ಮೇಶ್ವರದ ಆಸ್ಪತ್ರೆಯಲ್ಲಿ ಈ ಚಿಕಿತ್ಸೆ ಪ್ರಾರಂಭವಾಗಿರುವುದು ನೆರೆಯ ಕುಂದಗೋಳ, ಸವಣೂರ, ಶಿಗ್ಗಾಂವ, ಶಿರಹಟ್ಟಿ ತಾಲೂಕಿನ ರೋಗಿಗಳಿಗೂ ಅನಕೂಲವಾಗಿದೆ.

ನ್ಯಾಷನಲ್ ಹೆಲ್ತ್ ಮಿಷನ್(ಎನ್‌ಎಚ್‌ಎಂ) ಯೋಜನೆಯಡಿ ಅಡಿಯಲ್ಲಿ ಪಬ್ಲಿಕ್ ಪ್ರೈವೇಟ್ ಪಾರ್ಟಿಸಿಪೆಟ್ (ಪಿಪಿಪಿ), ಡಿಸಿಡಿಸಿ ಹೆಲ್ತ್ ಸರ್ವಿಸ್ ಪ್ರೈವೇಟ್ ಲಿಮಿಟೆಡ್ (ಕಿಡ್ನಿ ಕೇರ್) ಇವರ ಸಹಯೋಗದಲ್ಲಿ ಪ್ರಾರಂಭಗೊಳ್ಳಲಿರುವ 2 ಬೆಡ್‌ಗಳ ಅತ್ಯಾಧುನಿಕ ಯಂತ್ರೋಪಕರಣಗಳ ಕೇಂದ್ರ ಇದಾಗಿದೆ. ಬೆಳಿಗ್ಗೆ 8ರಿಂದ ಸಂಜೆ 4ರವರೆಗೆ ಕಾರ್ಯನಿರ್ವಹಿಸಲಿರುವ ಈ ಕೇಂದ್ರದಲ್ಲಿ ಓರ್ವ ರೋಗಿಯ ಡಯಾಲಿಸಿಸ್ ಮಾಡಲು ಕನಿಷ್ಠ 4 ಗಂಟೆ ಸಮಯಾವಕಾಶ ಬೇಕಾಗಿದ್ದರಿಂದ ಕೇಂದ್ರದಲ್ಲಿ ದಿನಕ್ಕೆ 4 ರೋಗಿಗಳ ಡಯಾಲಿಸಿಸ್ ಮಾಡಲಾಗುವುದು.

ರೋಗಿಗಳ ಆರೋಗ್ಯದ ಸ್ಥಿತಿ, ಅಗತ್ಯತೆಗನುಗುಣವಾಗಿ ಹೆಚ್ಚುವರಿ ಸೇವೆ ಮಾಡಲಾಗುತ್ತದೆ. 2 ಸಾವಿರ ರೂ ಮೌಲ್ಯದ ಇಂಜೆಕ್ಷನ್ ಸೇರಿ ಡಯಾಲಿಸಿಸ್ ಚಿಕಿತ್ಸೆ ಸಂಪೂರ್ಣ ಉಚಿತವಾಗಿದ್ದು, ಚಿಕಿತ್ಸೆಗೆ ಬರುವಾಗ ಆಧಾರ್ ಕಾರ್ಡ್, ರೇಷನ್ ಕಾರ್ಡ್, ರಕ್ತ ತಪಾಸಣೆ ಕಾರ್ಡ್, ಆಸ್ಪತ್ರೆಯ ಒಪಿಡಿಯಲ್ಲಿ ಚೀಟಿಯೊಂದಿಗೆ ಹೆಸರು ನೋಂದಾಯಿಸಬೇಕು. ಅತ್ಯಾಧುನಿಕ ಉಪಕರಣ, ನುರಿತ ತಜ್ಞರು ಇದ್ದಾರೆ ಎಂದು ಧಾರವಾಡ ಹಾಗೂ ಗದಗ ಜಿಲ್ಲೆಯ ಡಯಾಲಿಸಿಸ್ ಕೇಂದ್ರದ ಆಡಳಿತ ಅಧಿಕಾರಿ ಶಿದ್ದಲಿಂಗೇಶ್ವರ ಶಿವಶಿಂಪಿಗೇರ ತಿಳಿಸಿದ್ದಾರೆ.



ಲಕ್ಷ್ಮೇಶ್ವರ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಡಯಾಲಿಸಿಸ್ ಚಿಕಿತ್ಸೆ ಸಿಗಬೇಕೆಂಬ ಕೂಗು ಅನೇಕ ಬಡ ರೋಗಿಗಳದ್ದಾಗಿತ್ತು. ಸರ್ಕಾರ ಬಡರೋಗಿಗಳ ಆರೋಗ್ಯ ಸೇವೆಗಾಗಿ ಎಲ್ಲ ಸರ್ಕಾರಿ ಆಸ್ಪತ್ರೆಗಳಲ್ಲಿಯೂ ಡಯಾಲಿಸಿಸ್ ಕೇಂದ್ರ ಕಲ್ಪಿಸಿದೆ. ಲಕ್ಷ್ಮೇಶ್ವರದಲ್ಲಿ ಕಾರ್ಯಾರಂಭಗೊಳ್ಳುವಲ್ಲಿ ಶಾಸಕರು ಮತ್ತು ಹಿರಿಯ ಅಧಿಕಾರಿಗಳ ಪಾತ್ರ ಮಹತ್ವದ್ದಾಗಿದೆ. ರೋಗಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು.

– ಡಾ.ಶ್ರೀಕಾಂತ ಕಾಟೇವಾಲೆ.
ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿಗಳು.

ಅತ್ಯಂತ ದುಬಾರಿಯಾದ ಡಯಾಲಿಸಿಸ್ ಚಿಕಿತ್ಸೆಗಾಗಿ ಪರದಾಡುವ ಸ್ಥಿತಿ ಅನೇಕ ಬಡ ರೋಗಿಗಳದ್ದಾಗಿತ್ತು. ಲಕ್ಷ್ಮೇಶ್ವರ ಆಸ್ಪತ್ರೆಯಲ್ಲಿ ಡಯಾಲಿಸಿಸ್ ಕೇಂದ್ರ ಪ್ರಾರಂಭವಾಗಿರುವುದು ಕಿಡ್ನಿ ವೈಫಲ್ಯದಿಂದ ಬಳಲುತ್ತಿರುವ ಅನೇಕ ಬಡ ರೋಗಿಗಳ ಪಾಲಿಗೆ ಆಶಾಕಿರಣವಾಗಿದೆ. ಇದರಿಂದ ರೋಗಿಗಳು ನೆಮ್ಮದಿಯ ನಿಟ್ಟುಸಿರು ಬಿಡುವಂತಾಗಿದ್ದು, ಅದಕ್ಕಾಗಿ ಶ್ರಮಿಸಿದ ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳಿಗೆ ಕೃತಜ್ಞತೆಗಳು.

– ರಮೇಶ ಶೆಟ್ಟಿ.
ಡಯಾಲಿಸಿಸ್ ಚಿಕಿತ್ಸೆ ಪಡೆಯುವವರು.

### ನ್ಯಾಯವಾದಿಗಳಿಗೆ ಮಧ್ಯಸ್ಥಿಕೆಗಾರಿಕೆ ಕುರಿತು ಪುನರ್ ಮನನದ ಎರಡು ದಿನಗಳ ಕಾರ್ಯಾಗಾರ

# ಮಧ್ಯಸ್ಥಿಕೆ ಕೇಂದ್ರಗಳ ಪಾತ್ರ ಮಹತ್ವದ್ದು

■ವಿಜಯಸಾಕ್ಷಿ ಸುದ್ದಿ, ಧಾರವಾಡ

ನ್ಯಾಯದಾನದ ವಿಳಂಬವನ್ನು ತಪ್ಪಿಸಲು ಮತ್ತು ನ್ಯಾಯಾಲಯಗಳ ಕಾರ್ಯದೊತ್ತಡ ಕಡಿಮೆ ಮಾಡುವಲ್ಲಿ ಮಧ್ಯಸ್ಥಿಕೆ ಕೇಂದ್ರಗಳು ಪರಿಣಾಮಕಾರಿಯಾದ ಪಾತ್ರ ನಿರ್ವಹಿಸುತ್ತವೆ. ನ್ಯಾಯಾಧೀಶರು, ನ್ಯಾಯವಾದಿಗಳು ಕಕ್ಷಿದಾರರಿಗೆ ತ್ವರಿತ ನ್ಯಾಯಾಲಯ, ಲೋಕ ಅದಾಲತ್ ಮತ್ತು ಮಧ್ಯಸ್ಥಿಕೆ ಕೇಂದ್ರಗಳ ಬಗ್ಗೆ ಅರಿವು ಮೂಡಿಸಬೇಕೆಂದು ಧಾರವಾಡ ಜಿಲ್ಲಾ ಪ್ರಧಾನ ಹಾಗೂ ಸತ್ರ ನ್ಯಾಯಾಧೀಶೆ ಬಿ.ಜಿ. ರಮಾ ಹೇಳಿದರು.

ಅವರು ಶನಿವಾರ ಬೆಳಿಗ್ಗೆ ಧಾರವಾಡ ಜಿಲ್ಲಾ ಪಂಚಾಯತ ಸಭಾಗಂಣದಲ್ಲಿ ಕರ್ನಾಟಕ ಮಧ್ಯಸ್ಥಿಕೆ ಕೇಂದ್ರ, ಕರ್ನಾಟಕ ಕಾನೂನು ಸೇವೆಗಳ ಪ್ರಾಧಿಕಾರ, ಉಚ್ಚ ನ್ಯಾಯಾಲಯ, ಕಾನೂನು ಸೇವಾ ಸಮಿತಿ, ಧಾರವಾಡ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ಧಾರವಾಡ ವಕೀಲರ ಸಂಘದ ಆಶ್ರಯದಲ್ಲಿ ಗದಗ ಮತ್ತು ಧಾರವಾಡ ಜಿಲ್ಲೆಗಳ ನ್ಯಾಯವಾದಿಗಳಿಗೆ ಮಧ್ಯಸ್ಥಿಕೆಗಾರಿಕೆ ಕುರಿತು ಪುನರ್ ಮನನದ ಎರಡು ದಿನಗಳ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.




ಮಧ್ಯಸ್ಥಿಕೆ ಒಂದು ಕೌಶಲ್ಯ. ಕಾನೂನು ಚೌಕಟ್ಟಿನಲ್ಲಿ ಪ್ರಕರಣಗಳನ್ನು ಸುಗಮವಾಗಿ ಪರಿಹರಿಸಬೇಕು. ಜನರ ಮಧ್ಯದಲ್ಲಿರುವ ವಿವಾದಗಳನ್ನು ಸೌಹಾರ್ದಯುತವಾಗಿ ಬಗೆಹರಿಸಬೇಕು. ಈ ನಿಟ್ಟಿನಲ್ಲಿ ಮಧ್ಯಸ್ಥ ನ್ಯಾಯವಾದಿಗಳ ಪಾತ್ರ ಮಹತ್ವದ್ದಾಗಿದೆ ಎಂದು ಅವರು ಹೇಳಿದರು.

ಅತಿಥಿಗಳಾಗಿದ್ದ ಕರ್ನಾಟಕ ಬಾರ್ ಕೌನ್ಸಿಲ್ ಸದಸ್ಯ ವಿ.ಡಿ. ಕಾಮರಡ್ಡಿ ಹಾಗೂ ಧಾರವಾಡ ವಕೀಲರ ಸಂಘದ ಅಧ್ಯಕ್ಷ ಅಶೋಕ ಏಣಗಿ ಮಾತನಾಡಿದರು. ಕರ್ನಾಟಕ ರಾಜ್ಯ ಬಾರ್ ಕೌನ್ಸಿಲ್ ಮಾಜಿ ಅಧ್ಯಕ್ಷ ಆನಂದಕುಮಾರ ಮಗದುಮ್ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕಾರ್ಯಗಾರ ಸಂಪನ್ಮೂಲ ವ್ಯಕ್ತಿಗಳಾದ ಬೆಂಗಳೂರು ಮಧ್ಯಸ್ಥಿಕೆಗಾರ ಕೇಂದ್ರದ ಲಕ್ಷ್ಮೀಶರಾವ್ ಮತ್ತು ಬಿನಾ ದೇವರಾಜ್ ವೇದಿಕೆಯಲ್ಲಿದ್ದರು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಪರಶುರಾಮ ದೊಡ್ಡಮನಿ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಜಿಲ್ಲಾ ಮಧ್ಯಸ್ಥಿಕೆ ಕೇಂದ್ರದ ದೀಪಕ ವಾಳದ ಕಾರ್ಯಕ್ರಮ ನಿರೂಪಿಸಿದರು. ಹಿರಿಯ ನ್ಯಾಯವಾದಿ ವೈ.ಪಿ. ಮದ್ನೂರ ವಂದಿಸಿದರು.

ಕಾರ್ಯಗಾರದಲ್ಲಿ ಧಾರವಾಡ ಜಿಲ್ಲಾ ನ್ಯಾಯಾಲಯಗಳ ವಿವಿಧ ನ್ಯಾಯಾಧೀಶರು ಗದಗ ಮತ್ತು ಧಾರವಾಡ ಜಿಲ್ಲೆಗಳ ಮಧ್ಯಸ್ಥಗಾರ ನ್ಯಾಯವಾದಿಗಳು ಭಾಗವಹಿಸಿದ್ದರು.

ಕಾರ್ಯಾಗಾರದಲ್ಲಿ ಪೂರ್ಣ ಮಾಹಿತಿ ಪಡೆದುಕೊಂಡು ಉಭಯ ಕಕ್ಷಿದಾರರಿಗೆ ಅದರ ಅನುಕೂಲತೆಗಳನ್ನು ತಿಳಿ ಹೇಳಬೇಕು. ಅವರು ಇಬ್ಬರು ಸ್ವಯಂ ಆಗಿ ಒಪ್ಪಿಗೆ ಸೂಚಿಸುವಂತೆ ಅರಿವು ಮೂಡಿಸಬೇಕು. ವಿವಾದಗಳನ್ನು ಬಗೆ ಹರಿಸಯುವ ಹಂತಕ್ಕೆ ಒಯ್ಯುವುದು ಒಂದು ಜಾಣತನ. ನ್ಯಾಯದಾನದಲ್ಲಿ ವಿಳಂಬವಾಗದಂತೆ ಗಮನ ಹರಿಸಲು ಜನತಾ ನ್ಯಾಯಾಲಯ, ತ್ವರಿತ ನ್ಯಾಯಾಲಯ ಮತ್ತು ಮಧ್ಯಸ್ಥಗಾರಿಕೆ ಕೇಂದ್ರಗಳನ್ನು ಕಾನೂನು ಚೌಕಟ್ಟಿನಲ್ಲಿ ನ್ಯಾಯದಾನ ವ್ಯವಸ್ಥೆ ಮಾಡಿದೆ ಎಂದು ನ್ಯಾಯಾಧೀಶೆ ಬಿ.ಜಿ. ರಮಾ ತಿಳಿಸಿದರು.

## ರಕ್ತದಾನ ಪ್ರಾಣ ಉಳಿಸಲು ಸಹಕಾರಿ: ಜಿ.ಎಸ್. ಪಾಟೀಲ



■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಮಾನವ ಅಂಗಾಂಗಗಳಲ್ಲಿ ಕಣ್ಣು ಪ್ರಮುಖ ಪಾತ್ರ ವಹಿಸಿದರೆ, ರಕ್ತದಾನ ಇನ್ನೊಬ್ಬ ಮನುಷ್ಯನ ಪ್ರಾಣ ಉಳಿಸಲು ಸಹಕಾರಿಯಾಗುತ್ತದೆ. ಇಂತಹ ಕಾರ್ಯಕ್ರಮ ಆಯೋಜಿಸಿರುವ ಸಿದ್ದಪ್ಪ ಬಂಡಿ ಅಭಿಮಾನಿ ಬಳಗದ ಕಾರ್ಯ ಶ್ಲಾಘನೀಯ ಎಂದು ಶಾಸಕ ಜಿ.ಎಸ್.ಪಾಟೀಲ ಹೇಳಿದರು.

ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಸಿದ್ದಪ್ಪ ಬಂಡಿ ಅಭಿಮಾನಿ ಬಳಗದ ವತಿಯಿಂದ ಶನಿವಾರ ಉಚಿತ ನೇತ್ರ ತಪಾಸಣಾ ಶಿಬಿರ, ರಕ್ತದಾನ ಶಿಬಿರ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಜೀವನದಲ್ಲಿ ಅತ್ಯಮೂಲ್ಯವಾದ ಕಣ್ಣು ಸುರಕ್ಷಿತವಾಗಿರಬೇಕಾದರೆ ಕಾಲ ಕಾಲಕ್ಕೆ ತಪಾಸಣೆ ಹಾಗೂ ಕಾಳಜಿ ಬಹುಮುಖ್ಯ. ಪ್ರಪಂಚ ನೋಡಿ ಆನಂದಿಸಬೇಕಾದರೆ ಕಣ್ಣನ್ನು ಜೋಪಾನವಾಗಿ ಇಟ್ಟುಕೊಳ್ಳಲು ಪ್ರತಿಯೊಬ್ಬರು ಮುಂದಾಗಬೇಕು. ಸೂಕ್ಷ್ಮ ಅಂಗ ಕಣ್ಣು ಬದುಕಿಗೆ ಬೆಳಕಾಗಿರಬೇಕಾದರೆ ಹಿರಿಯರಿಗೆ ಮಕ್ಕಳು ಇಂತಹ ಉಚಿತ ತಪಾಸಣೆಗೆ ಕರೆತರುವ ಮೂಲಕ ಹಿರಿಯರ ಸೇವೆಗೆ ಬದ್ಧರಾಗಿರಬೇಕು. ರಕ್ತ ಯಾವುದೋ ಅಂಗಡಿ– ಮುಂಗಟ್ಟುಗಳಲ್ಲಿ ಸಿಗುವ ವಸ್ತುವಲ್ಲ. ಮನುಷ್ಯರ ದೇಹದಲ್ಲಿ ಉತ್ಪತ್ತಿಯಾಗುವ ಸಂಪನ್ಮೂಲವಾಗಿದೆ. ಇಂದಿನ ದಿನಗಳಲ್ಲಿ ರಕ್ತದ ಅಗತ್ಯ ಹೆಚ್ಚಿದ್ದು, ಶಸ್ತ್ರ ಚಿಕಿತ್ಸೆ, ಮಹಿಳೆಯರಿಗೆ ಹಾಗೂ ಕಡಿಮೆ ರಕ್ತ ಇರುವ ರೋಗಿಗಳಿಗೆ ಅವಶ್ಯವಾಗಿದೆ. ಈ ನಿಟ್ಟಿನಲ್ಲಿ ಹೆಚ್ಚೆಚ್ಚು ರಕ್ತದಾನ ಶಿಬಿರಗಳು ನಡೆಯಬೇಕು ಎಂದರು.

ವೀರಶೈವ ಲಿಂಗಾಯತ ಸಮಾಜ ಗಜೇಂದ್ರಗಡ –ಉಣಚಗೇರಿ ಅಧ್ಯಕ್ಷ ಸಿದ್ದಪ್ಪ ಬಂಡಿ, ಕೆಪಿಸಿಸಿ ಸದಸ್ಯ ಅನಂದಸ್ವಾಮಿ ಗಡ್ಡದೇವರಮಠ, ದೊಡ್ಡಬಸನಗೌಡ ಬಯ್ಯಾಪುರ ಮಾತನಾಡಿದರು.

ಕೂಡಲಸಂಗಮದ ಬಸವ ಜಯ ಮೃತ್ಯುಂಜಯ ಸ್ವಾಮೀಜಿ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ವ ೧ ೧ ಖ ೦ ಡ ರ ಾ ದ ಐ.ಎಸ್.ಪಾಟೀಲ, ವಿಶ್ವನಾಥ ಜಿಡ್ಡಿಬಾಗಿಲ, ಬಿ.ವಿ.ಕಂಬಳ್ಯಾಳ, ಶಿವರಾಜ್ ಘೋರ್ಪಡೆ, ಅಪ್ಪು ಮತ್ತಿಕಟ್ಟಿ, ಎಚ್.ಎಸ್. ಸೋಂಪುರ, ಶಿವಕುಮಾರ ಕೊರಧಾನ್ಯಮಠ, ವಿರೂಪಾಕ್ಷಪ್ಪ ನಂದೆಣ್ಣವರ, ಯಶರಾಜ್ ಘೋರ್ಪಡೆ, ಚಂಬಣ್ಣ ಚವಡಿ, ಮುರ್ತುಜಾ ಡಾಲಾಯತ, ಬಸವರಾಜ ಚನ್ನಿ, ಕೆ.ಜಿ.ಸಂಗಟಿ, ಎಸ್.ಎಸ್.ನರೇಗಲ್, ವಿದ್ಯಾ ಬಂಡಿ, ಮಂಜುಳಾ ರೇವಡಿ ಸೇರಿದಂತೆ ಇತರರು ಇದ್ದರು.

## ಕೇಂದ್ರ ಸರ್ಕಾರ ಐಸಿಡಿಎಸ್ ಕಾರ್ಯಕ್ರಮ ಪುನರ್ ವಿಮರ್ಶೆ ಮಾಡಬೇಕು: ಬಸವರಾಜ ಬೊಮ್ಮಾಯಿ

■ವಿಜಯಸಾಕ್ಷಿ ಸುದ್ದಿ, ಹಾವೇರಿ

ಕೇಂದ್ರ ಸರ್ಕಾರ ಐಸಿಡಿಎಸ್ ಕಾರ್ಯಕ್ರಮವನ್ನು ಪುನರ್ ವಿಮರ್ಶೆ ಮಾಡಬೇಕು. ಬಹಳ ವರ್ಷದ ಕಾರ್ಯಕ್ರಮ ಇದಾಗಿದ್ದು, ಆಡಳಿತಾತ್ಮಕ ಬದಲಾವಣೆ ಹಾಗೂ ಬಜೆಟ್ ಹೆಚ್ಚಳ ಮಾಡಬೇಕು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ್ ಬೊಮ್ಮಾಯಿ ಹೇಳಿದರು.

ಅವರು ಹಾವೇರಿಯಲ್ಲಿ ನಡೆದ ಅಖಿಲ ಭಾರತ ಕಾರ್ಮಿಕ ಸಂಘಗಳ ಒಕ್ಕೂಟದ ವತಿಯಿಂದ ಏರ್ಪಡಿಸಿದ್ದ ಗೌರವ ಧನದಲ್ಲಿ ದುಡಿಯುವ ಅಂಗನವಾಡಿ ನೌಕರರ. ಬಿಸಿಯೂಟ ತಯಾರಕರ ಮತ್ತು ಸಂಜೀವಿನಿ ಗ್ರಾಮ ಪಂಚಾಯತಿ ಮಹಿಳಾ ಒಕ್ಕೂಟದ ನೌಕರರ ಸಮಾವೇಶ ಉದ್ಘಾಟಿಸಿ ಮಾತನಾಡಿದರು.



ಸಮಾಜದಲ್ಲಿ ಮಕ್ಕಳು ಹುಟ್ಟುವುದು, ಅಂಗನವಾಡಿಗೆ ಹೋಗುವುದು, ದೊಡ್ಡವರಾಗುವುದು ನಿಲ್ಲುವುದಿಲ್ಲ. ಶಾಲೆ, ಕಾಲೇಜು ಶಿಕ್ಷಣ ಕಲಿಯುತ್ತವೆ. ಮಕ್ಕಳ ಜೊತೆಗೆ ಅಂಗನವಾಡಿ ಕಾರ್ಯಕರ್ತೆಯರ ಬದುಕು ಹಸನಾಗಬೇಕು. ಸ್ವಾಭಿಮಾನದ ಹಾಗೂ ಸ್ವಾವಲಂಬನೆಯ ಬದುಕು ನಿಮ್ಮದಾಗಬೇಕು. ಆ ನಿಟ್ಟಿನಲ್ಲಿ ನಿಮ್ಮ ಬೇಡಿಕೆಗಳಿಗೆ ಸ್ಪಂದಿಸುವ ಕೆಲಸ ಮಾಡುತ್ತೇನೆ. ನಿಮ್ಮ ಒಳ್ಳೆಯತನದಲ್ಲಿ ಮಕ್ಕಳ ಭವಿಷ್ಯ, ಸಮಾಜದ ಭವಿಷ್ಯ, ದೇಶದ ಭವಿಷ್ಯ ಇದೆ ಎಂದು ಹೇಳಿದರು.

ಈ ಸಮಾಜದಲ್ಲಿ ತಾಯಿ ಮಗುವಿನ ಸಂಬಂಧ ಅತ್ಯಂತ ಶ್ರೇಷ್ಠ ಸಂಬಂಧ. ಮನುಷ್ಯನ ಜನ್ಮ ಪೂರ್ವ ಸಂಬಂಧ ತಾಯಿ ಮಗುವಿನ ನಡುವೆ ಮಾತ್ರ ಇರುತ್ತದೆ. ಆ ನಂತರ ತಂದೆ, ಅಣ್ಣ, ಬಂಧು ಬಳಗ ಎಲ್ಲ. ಆ ತಾಯಿ ತನ್ನ ಚಿಕ್ಕ ಮಗುವನ್ನು ಇನ್ನೊಂದು ತಾಯಿಯ ಬಳಿಗೆ ಕಳುಹಿಸುತ್ತಾಳೆ. ಅಂಗನವಾಡಿ ತಾಯಂದಿರು ಎಲ್ಲ ಮಕ್ಕಳನ್ನು ತಮ್ಮ ಮಕ್ಕಳಂತೆ ವಿದ್ಯಾಬುದ್ಧಿ ಕೊಟ್ಟು ಕಲಿಸುವ ನೀವು ಶ್ರೇಷ್ಠರು ಎಂದು ಹೇಳಿದರು.

ನಿಮ್ಮ ಮೂರು ದಶಕಗಳ ಸೇವೆಗೆ ಸೂಕ್ತ ಸ್ಥಾನ ಮಾನ ಹಾಗೂ ಗೌರರವನ್ನು ಕೊಡಲೇಬೇಕಾಗುತ್ತದೆ. ನಿಮ್ಮ ಧ್ವನಿಯಾಗಿ ನಿಮ್ಮ ಸಹೋದರ ಇದ್ದಾನೆ ಎಂದು ತಿಳಿಯಿರಿ. ನಿಮ್ಮ ಬೇಡಿಕೆಗಳಿಗೆ ಸ್ಪಂದಿಸುವ ಪ್ರಾಮಾಣಿಕ ಪ್ರಯತ್ನವನ್ನು ನಾನು ಮಾಡುತ್ತೇನೆ. ನೀವು ನಿಮ್ಮ ಕೆಲಸವನ್ನು ಪ್ರಾಮಾಣಿಕವಾಗಿ ಮಾಡಿ ಎಂದು ಹೇಳಿದರು.

ನಾನು ಚಿಕ್ಕವನಿದ್ದಾಗ ಅಂಗನವಾಡಿಗೆ ಹೋಗಿ ಕಲಿತು ಬಂದಿದ್ದೇನೆ. ಈಗ ವ್ಯವಸ್ಥೆ ಸಾಕಷ್ಟು ಬದಲಾಗಿದೆ. ನಾವು ನೂತನ ಶಿಕ್ಷಣ ನೀತಿಯನ್ನು ಜಾರಿಗೆ ತಂದಿದ್ದೇವೆ. ನಾನು ಸಿಎಂ ಇದ್ದಾಗ ಸ್ತ್ರೀ ಸಾಮರ್ಥ್ಯ ಯೋಜನೆ ಜಾರಿ ಮಾಡಿದ್ದೆ. ಅದರಲ್ಲಿ ಒಂದು ಲಕ್ಷ ರೂ. ರಾಜ್ಯ ಸರ್ಕಾರದ್ದು, ನಾಲ್ಕು ಲಕ್ಷ ರೂ. ಬಡ್ಡಿ ರಹಿತ ಸಾಲ ನೀಡುವ ಯೋಜನೆ. ಈ ಯೋಜನೆ ಮೂಲಕ ಹಾವೇರಿ ಜಿಲ್ಲೆಗೆ 54 ಕೋಟಿ ರೂ. ತಂದಿದ್ದೇವು. ಅದು ಪ್ರತಿ ವರ್ಷ ಹೆಚ್ಚಾಗಬೇಕು. ಮಹಿಳೆಯರಲ್ಲಿ ಸಾಮರ್ಥ್ಯ ಇದೆ. ಅದನ್ನು ಗುರುತಿಸುವ ಕೆಲಸ ಆಗಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವಿಧಾನಸಭೆ ಉಪಸಭಾಧ್ಯಕ್ಷ ರುದ್ರಪ್ಪ ಲಮಾಣಿ, ಹಾವೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಸ್.ಎಫ್.ಎನ್. ಗಾಜೀಗೌಡರ ಹಾಗೂ ಅಖಿಲ ಭಾರತ ಕಾರ್ಮಿಕ ಸಂಘಗಳ ಒಕ್ಕೂಟದ ಜಿಲ್ಲಾ ಅಧ್ಯಕ್ಷ ಹೊನ್ನಪ್ಪ ಮರೆಮ್ಮನವರ ಸೇರಿದಂತೆ ಹಲವಾರು ಮಹಿಳೆಯರು ಹಾಜರಿದ್ದರು.

ಈ ದೇಶದಲ್ಲಿ ಮಕ್ಕಳ ಭವಿಷ್ಯವನ್ನು ನಿರ್ಧಾರ ಮಾಡುವ, ರೂಪಿಸುವ ಕೆಲಸವನ್ನು ಅಂಗನವಾಡಿ ಕಾರ್ಯಕರ್ತೆಯರು ಮಾಡುತ್ತಿದ್ದಾರೆ. ಈ ದೇಶದ ಭವಿಷ್ಯವನ್ನು ರಾಜಕಾರಣಿಗಳು, ಶಾಸಕರು, ಸಂಸದರು ಬರೆಯುವುದಿಲ್ಲ. ತಾಯಂದಿರು, ಅಂಗನವಾಡಿ ಕಾರ್ಯಕರ್ತರು ಬರೆಯುತ್ತಾರೆ. ಅವರು ಮಕ್ಕಳಿಗೆ ಚಿಕ್ಕವಯಸ್ಸಿನಲ್ಲಿ ಯಾವ ರೀತಿಯ ಪಾಠ ಮಾಡುತ್ತಾರೆ. ಆ ರೀತಿ ಮಕ್ಕಳು ಬೆಳೆಯುತ್ತಾರೆ ಎಂದರು.

ನನ್ನ ಮುಖ್ಯಮಂತ್ರಿಯ ಅವಧಿಯಲ್ಲಿ ಕೊವಿಡ್ ಸಂದರ್ಭದಲ್ಲಿ ನಿಮ್ಮ ಭವಿಷ್ಯವನ್ನು ನಿರ್ಧಾರ ಮಾಡುವ ಕ್ರಾಂತಿಕಾರಕ ನಿರ್ಧಾರವನ್ನು ನಾನು ಮಾಡಿದ್ದೇನೆ. ನಿಮ್ಮ ಹಿರಿತನಕ್ಕೆ ತಕ್ಕಂತೆ ಗೌರವ ಧನ ಹೆಚ್ಚಳ ಮಾಡಿದ್ದೇನೆ. ನೀವು ಅತ್ಯಂತ ಮಹತ್ವದ ಕೆಲಸ ಮಾಡುತ್ತಿದ್ದೀರಿ, ನೀವು ನಾನು ಅಂಗನವಾಡಿಯ ಮುಖ್ಯಸ್ಥ ಅಂತ ಹೆಮ್ಮೆಯಿಂದ ಹೇಳಿಕೊಳ್ಳಬೇಕು. ನೀವು ಮಕ್ಕಳ ಭವಿಷ್ಯವನ್ನು ಬರೆಯುವವರು, ಭವಿಷ್ಯ ಬರೆಯುವವರು ಕಾರ್ಯಕರ್ತರು ಹೇಗಾಗುತ್ತಾರೆ. ದೇವರಾಗುತ್ತಾರೆ ಎಂದು ಹೇಳಿದರು.

# ಶುದ್ಧಗಂಗಾ ಪ್ರೇರಕರ ಪ್ರಗತಿ ಪರಿಶೀಲನಾ ಸಭೆ



■ ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಹುಲಕೋಟಿಯ ಕೆವಿಕೆಯಲ್ಲಿ ಶನಿವಾರ ಕೊಪ್ಪಳ ಮತ್ತು ಗದಗ ಜಿಲ್ಲೆಯ ಶುದ್ಧಗಂಗಾ ಪ್ರೇರಕರ ಪ್ರಗತಿ ಪರಿಶೀಲನಾ ಸಭೆ ಜರುಗಿತು.

ಸಭೆಯನ್ನು ಸಮುದಾಯ ಅಭಿವೃದ್ಧಿ ವಿಭಾಗದ ಪ್ರಾದೇಶಿಕ ನಿರ್ದೇಶಕ ಆನಂದ ಸುವರ್ಣ ಮತ್ತು ಕಲ್ಯಾಣ ಕರ್ನಾಟಕ ಕೊಪ್ಪಳ ಪ್ರಾದೇಶಿಕ ನಿರ್ದೇಶಕ ಚಂದ್ರಶೇಖರ ಅವರು ದೀಪ ಬೆಳಗಿಸುವ ಮೂಲಕ ಸಭೆಗೆ ಚಾಲನೆ ನೀಡಿದರು.

ಆನಂದ ಸುವರ್ಣ ಮಾತನಾಡಿ, ಶುದ್ಧ ಗಂಗಾ ಪ್ರೇರಕರು ಕೆಲಸ ನಿರ್ವಹಣೆಯನ್ನು ಶುದ್ಧವಾಗಿ ನೆರವೇರಿಸಬೇಕು ಎಂದು ತಿಳಿಸಿದರು. ಘಟಕದ ಸ್ವಚ್ಛತೆ ಮತ್ತು ಸಮುದಾಯ ಅಭಿವೃದ್ಧಿ ವಿಭಾಗದ ಕಾರ್ಯಕ್ರಮದ ಬಗ್ಗೆ ವಿವರಿಸಿದರು. ಗ್ರಾಮೀಣ ಪ್ರದೇಶದಲ್ಲಿ ಶುದ್ಧ ನೀರನ್ನು ಪ್ರತಿಯೊಬ್ಬರ ಮನೆಗೆ ವಿತರಣೆ ಮಾಡುವದು ಪುಣ್ಯದ ಕೆಲಸ. ನೀವು ಮಾಡಿದ ಕೆಲಸದಲ್ಲಿ ಪ್ರಾಮಾಣಿಕತೆ ಇರಲಿ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಪ್ರೇರಕರನ್ನು ಸನ್ಮಾನಿಸಲಾಯಿತು. ಶಿವಾನಂದ ಆಚಾರ್ಯ, ಚಂದ್ರಶೇಖರ ಇತರರು ಇದ್ದರು.


## ಸರ್ವಕ್ಕೂ ಆಧಾರವಾದ ಮನಸ್ಸು ದೇಹದ ಎಲ್ಲಾ ಕ್ರಿಯೆಗಳಿಗೆ ಮೂಲ

# ನಮ್ಮ ಮನಸ್ಸೇಕೆ ಹೀಗೆ....?

'ಹುಚ್ಚುಕೋಡಿ ಮನಸ್ಸು ಅದು ಹದಿನಾರು ವಯಸ್ಸು' ಎನ್ನುವ ಕವಿವಾಣಿ ಹದಿಹರೆಯದ ಮನೋ ತಲ್ಲಣಗಳನ್ನು ಕಾವ್ಯಮಯವಾಗಿ ಜೋಡಿಸಿದೆ. ವಾಸ್ತವದಲ್ಲಿ ಹಳಿತಪ್ಪಿದ ರೈಲು ಬಂಡಿಯ ಚಿತ್ರಣವನ್ನು ಮನುಷ್ಯನ ಮನಸ್ಸಿನ ಸ್ಥಿತಿಗತಿಗಳಿಗೆ ಹೋಲಿಕೆ ಮಾಡಿ ಹೇಳಿದಂತಿದೆ. 'ಮಾತುಮಾತಿಗೇಕೊ ನಗು ಮರುಘಳಿಗೆಯ ಮೌನ' ಎನ್ನುವಾಗ ಚಂಚಲಶೀಲ ಸ್ವಭಾವವನ್ನು ಪ್ರತಿಬಿಂಬಿಸುತ್ತದೆ. ಈ ಮನಸ್ಸೇಕೆ ಹೀಗೆ ಎಂದು ಪ್ರಶ್ನಾರ್ಥಕವಾಗಿ ನೋಡುವಾಗ, ಮನುಷ್ಯನ ಪ್ರತಿ ಕ್ಷಣದ ಅನುಭವಕ್ಕೆ ಮನಸ್ಸೇ ಕಾರಣ. ಮನಸ್ಸು ಮಾಡಿದರೆ ಗಾಂಧಿನೂ ಆಗಬಹುದು, ಗೋಡ್ಸೆಯೂ ಆಗಬಹುದು. ಒಳಿತು-ಕೆಡುಕುಗಳ ಸಾಕ್ಷಿ ಈ ಮನಸ್ಸು.

ಒಮ್ಮೆ ಖುಷಿ, ಮತ್ತೊಮ್ಮೆ ದು-ಃಖ. ಹೀಗೆ ಕೋಪ-ತಾಪ, ನೋವು-ನಲಿವುಗಳ ಸಮಿಶ್ರಣ ಈ ಮನಸ್ಸಿನ ಏರಿಳಿತದಲ್ಲಿ ಸಹಜ. ಮನಸ್ಸೊಂದು ನಮ್ಮೊಳಗೆ ಒಬ್ಬ ಉತ್ತಮ ಸ್ನೇಹಿತ, ಆತ್ಮ ಬಂಧು, ಕೆಲವೊಮ್ಮೆ ಪ್ರೀತಿ ಪಾತ್ರ, ಮತ್ತೆ ಕೆಲವೊಮ್ಮೆ ಜನ್ಮಾಂತರದ ವೈರಿ, ಅತಿಶಯದ ಒಡನಾಡಿಯಾಗಿ ಹಲವು ರೀತಿಯಲ್ಲಿ ಆಪ್ತವೆನಿಸುತ್ತದೆ. ನಮ್ಮೊಳಗೆ ನಾವು ನಮಗಾಗಿ ನಗುವುದು ಕಲಿಸಿದ ನಗೆಗಾರ, ಭಾವಾಂತರಂಗದ ಅಲೆಯೆಬ್ಬಿಸಿದ ಸೊಗಸುಗಾರ, ತಿದ್ದಿ ಬುದ್ಧಿ ಹೇಳಿದ ಮಾರ್ಗದರ್ಶಕ, ಜವಾಬ್ದಾರಿಗಳ ನೆನಪಿಸಿದ ಕಾಯಕಯೋಗಿ, ಅತಿಶಯದ ಅತೀರೇಕಗಳಿಂದ ನಮ್ಮನ್ನೇ ದಿಕ್ಕು ತಪ್ಪಿಸಿದ ಮೋಡಿಗಾರ, ಸಕಲ ಸಿದ್ಧಿಗಳಿಗೂ ದಾರಿ ತೋರಿದ ಪ್ರೇರಕ ಶಕ್ತಿ.

ಒಂದೇ ಮಾತಿನಲ್ಲಿ ಹೇಳುವುದಾದರೆ, ನಮ್ಮನ್ನು ದಾಸನನ್ನಾಗಿ ಮಾಡಿ ತಾನು ಅರಸನಾದ ಜಾದೂಗಾರ ಈ ಮನಸ್ಸು. ಹೀಗೆ ಸರ್ವಕ್ಕೂ ಆಧಾರವಾದ ಮನಸ್ಸು ದೇಹದ ಎಲ್ಲಾ ಕ್ರಿಯೆಗಳಿಗೆ ಮೂಲವಾಗಿದೆ. ಮನ ಉಲ್ಲಸಿತವಾಗಿ ಕ್ರಿಯಾಶೀಲವಾದಾಗ ಮಾತ್ರ ಎಂತಹದೇ ಅದ್ಭುತ ಕಾರ್ಯಗಳನ್ನು ಮಾಡಲು



ಸಾಧ್ಯ. ಮನದ ತುಮುಲಗಳಿಗೆ ವಯಸ್ಸಿನ ಮಿತಿ ಇರದು. ಒಂದೊಂದು ವಯೋಮಾನದಲ್ಲಿ ಅದಕ್ಕೆ ಹೊಂದುವ ಅಥವಾ ಹೊಂದದೆಯೋ ಇರುವ ಮನಸ್ಸಿನ ಚಿತ್ರ ವಿಚಿತ್ರವಾದ ಸ್ವಭಾವವನ್ನು ಕಾಣುತ್ತೇವೆ.

ಉದಾಹರಣೆಗೆ 'ಪ್ರೀತಿ' ಎನ್ನುವ ಪದಕ್ಕೆ ಸಿಗುವ ವ್ಯಾಖ್ಯಾನ, ಅನುಭವಗಳು ಭಿನ್ನವಾಗಿರುತ್ತವೆ. ಮಗುತನದಲ್ಲಿ ಪ್ರೀತಿ ಬಾಂಧವ್ಯ ಮಮತೆ ಕಾರುಣ್ಯ ಮುಂದೆ ಬಾಲ್ಯದಲ್ಲಿ, ಯೌವ್ವನದಲ್ಲಿ, ಮಧ್ಯವಯಸ್ಕದಲ್ಲಿ ಹಾಗೂ ಮುಪ್ಪಾವಸ್ಥೆಯಲ್ಲಿ ಅದರದೇ ಆದ ಸ್ವರೂಪವನ್ನು ಪಡೆಯುತ್ತದೆ ಇದು ಸಹಜ ಹಾಗೂ ವಾಸ್ತವೂ ಹೌದು. ಈ ತರಹ ಮನಸ್ಸಿನಲ್ಲಿ ಮೂಡಿ ಬರುವ ಭಾವನೆಗಳಿಗೆ ತಡೆಗೋಡೆ ಹಾಕಲು ಕಷ್ಟವಾಗಬಹುದು. ಹಾಗಾಗಿ ಮನುಷ್ಯನ ಚಿತ್ತ ಚಂಚಲತೆಗೆ ಈ ಭಿನ್ನ ಹಂತಗಳು, ಅನುಭವಗಳು ಕಾರಣವಾಗುತ್ತವೆ.

ಮನಸ್ಸಿಗೆ ಹಿತವಾದದ್ದು, ದೇಹಕ್ಕೆ ಬದುಕಿಗೆ ಅಹಿತವಾಗಿಯೂ ಇರಬಹುದು. ಉದಾಹರಣೆಗೆ ಸಿಹಿ ತಿನ್ನುವುದು ಮನಸ್ಸಿಗೆ ಹಿತವಾದರೆ, ಕೆಲವೊಮ್ಮೆ ದೇಹಕ್ಕೆ ಅಹಿತವಾಗಿಯೂ ಇರಬಹುದು. ಹಾಗೆಯೇ ಬದುಕಿನ ಬಹುತೇಕ ಸಂಗತಿಗಳು ಮನಸ್ಸಿಗೆ ಹಿತವಾದರೆ, ಬದುಕಿಗೆ ಸಹ್ಯವಾಗಲಾರವು. ಅದು ವಸ್ತು, ವಿಷಯ, ಸಂಗತಿ, ಅಥವಾ ವ್ಯಕ್ತಿಯೇ ಆಗಿರಬಹುದು. ಇದೆಲ್ಲದರ ಆಚೆಗೂ ಪ್ರತಿಯೊಬ್ಬರಲ್ಲೂ ಸದಾ ಸಕಾರಾತ್ಮಕವಾಗಿ ಚಿಂತನೆ ಮಾಡುವ ಮನಸ್ಸು ಇದ್ದೇ ಇರುತ್ತದೆ. ಮನಸ್ಸಿನ ನಕಾರಾತ್ಮಕತೆ ಅದು ಅವರವರ ಅವನತಿಗೆ ಕಾರಣವಾದರೆ, ಸಕಾರಾತ್ಮಕತೆಯು ಬದುಕಿನ ಜೀವಂತಿಕೆಯ ಅನುಭವ ನೀಡುತ್ತದೆ.

ದೇಹ ಮನಸ್ಸು ಮತ್ತು ಆತ್ಮ ಈ ಮೂರರ ಅನುಸಂಧಾನ ನಿತ್ಯ ನಿರಂತರವಾದದು. ಮನಸ್ಸು ಆತ್ಮದ ಒಡನಾಡಿಯಾದರೆ ಎಂದೂ ಸಹ ವಿಚಲಿತವಾಗಲಾರದು. ಆದರೆ ಆತ್ಮದ ಸಾಂಗತ್ಯದಿಂದ ದೂರ ಸರಿದರೆ ಚಂಚಲತೆಗೆ ಸಿಲುಕಿ ವಿಷಯಾಸಕ್ತಿಗಳಲ್ಲಿ ಕಳೆದುಹೋಗುವುದು. ಹೀಗೆ ಬದುಕಿನ ಪ್ರತಿ ಘಟನಾವಳಿಗಳಿಗೆ ಈ ಮನಸೇ ಕಾರಣ, ಪರಿಣಾಮ ಹಾಗೂ ಪರಿಹಾರವೂ ಸಹ ಆಗಬಲ್ಲದು.

ಹಾಗಾಗಿ ಮನಸ್ಸೇಕೆ ಹೀಗೆ... ಎನ್ನುವಾಗ ನಿಶ್ಚಿತ ಆಕಾರ, ಬಣ್ಣ, ತೂಕ ಗಾತ್ರವಿರದ ಈ ಅಗೋಚರ ಹಾಗೂ ಎಲ್ಲ ಗೋಚರಕ್ಕೂ ಕಾರಣವಾದ ಮನಸ್ಸಿನ ಬಗ್ಗೆ ತಿಳಿಯುತ್ತಾ ಹೋದಂತೆ ಅನಿರೀಕ್ಷಿತ ತಿರುವುಗಳೇ ಜಾಸ್ತಿ ಕಾಣಸಿಗುತ್ತವೆ ಅಲ್ಲವೇ...?



-ಸುಧಾ ಹುಚ್ಚಣ್ಣವರ, ಗದಗ.

# ಗಾಜಾದಲ್ಲಿ ಇಸ್ರೇಲ್‌ನ 'ಜನಾಂಗೀಯ ಕೃತ್ಯಗಳು' ನಿಲ್ಲಬೇಕು: ಪ್ರಿಯಾಂಕಾ ಗಾಂಧಿ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ



ಗಾಜಾದಲ್ಲಿ ಇಸ್ರೇಲ್ ನಡೆಸುತ್ತಿರುವ ಮಿಲಿಟರಿ ದಾಳಿಯನ್ನು ಸ್ವೀಕಾರಾರ್ಹವಲ್ಲ ಮತ್ತು ಹತ್ಯಾಕಾಂಡ ಎಂದು ಹೇಳಿದ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ವಾದ್ರಾ, ಇದನ್ನು ಜಗತ್ತಿನ ಪ್ರತಿಯೊಂದು ಸರ್ಕಾರ ಖಂಡಿಸಬೇಕು ಎಂದು ಶುಕ್ರವಾರ ಕರೆ ನೀಡಿದ್ದಾರೆ.

ನಾಗರಿಕರು, ತಾಯಂದಿರು, ತಂದೆ, ವೈದ್ಯರು, ದಾದಿಯರು, ಸಹಾಯಕರು, ಪತ್ರಕರ್ತರು, ಶಿಕ್ಷಕರು, ಬರಹಗಾರರು, ಕವಿಗಳು, ಹಿರಿಯ ನಾಗರಿಕರು ಮತ್ತು ದಿನದಿಂದ ದಿನಕ್ಕೆ ನಾಶವಾಗುತ್ತಿರುವ ಸಾವಿರಾರು ಅಮಾಯಕ ಮಕ್ಕಳ ಪರವಾಗಿ ಧ್ವನಿ ಎತ್ತಲು ಇನ್ನು ಮುಂದೆ ಸಾಕಾಗುವುದಿಲ್ಲ. ಗಾಜಾದಲ್ಲಿ ಭೀಕರ ನರಮೇಧ ನಡೆಯುತ್ತಿದೆ" ಎಂದು ಕಾಂಗ್ರೆಸ್ ನಾಯಕಿ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

ದ್ವೇಷ ಮತ್ತು ಹಿಂಸಾಚಾರದಲ್ಲಿ ನಂಬಿಕೆಯಿಲ್ಲದ ಎಲ್ಲ ಇಸ್ರೇಲಿ ನಾಗರಿಕರು ಸೇರಿದಂತೆ ಪ್ರತಿಯೊಬ್ಬ ಬಲ-ಚಿಂತನೆಯ ವ್ಯಕ್ತಿಯ ನೈತಿಕ ಜವಾಬ್ದಾರಿಯಾಗಿದೆ. ಇಸ್ರೇಲಿ ಸರ್ಕಾರದ ನರಮೇಧದ ಕ್ರಮಗಳನ್ನು ಖಂಡಿಸಲು ಮತ್ತು ಅವುಗಳನ್ನು ನಿಲ್ಲಿಸಲು ಒತ್ತಾಯಿಸಲು ವಿಶ್ವದ ಪ್ರತಿಯೊಂದು ಸರ್ಕಾರ ಮುಂದಾಗಬೇಕು" ಎಂದು ಅವರು ಹೇಳಿದರು.

"ನಾಗರಿಕತೆ ಮತ್ತು ನೈತಿಕತೆಯನ್ನು ಪ್ರತಿಪಾದಿಸುವ ಜಗತ್ತಿನಲ್ಲಿ ಅವರ ಕ್ರಮಗಳು ಸ್ವೀಕಾರಾರ್ಹವಲ್ಲ. ಬದಲಿಗೆ, ನಾವು ಇಸ್ರೇಲಿ ಪ್ರಧಾನಿಗೆ ಯುಎಸ್ ಕಾಂಗ್ರೆಸ್‌ನಲ್ಲಿ ಎದ್ದುಕಾಣುವ ಚಪ್ಪಾಳೆ ನೀಡುವ ಚಿತ್ರಣಕ್ಕೆ ಒಳಗಾಗಿದ್ದೇವೆ. ಅವರು ಇದನ್ನು 'ಅನಾಗರಿಕತೆ ಮತ್ತು ನಾಗರಿಕತೆಯ ನಡುವಿನ ಘರ್ಷಣೆ' ಎಂದು ಕರೆಯುತ್ತಾರೆ. ಅವರ ಸರ್ಕಾರವು ಅನಾಗರಿಕವಾಗಿದೆ ಮತ್ತು ಅವರ ಅನಾಗರಿಕತೆಗೆ ಹೆಚ್ಚಿನ ಪಾಶ್ಚಿಮಾತ್ಯ ಪ್ರಪಂಚದ ಅನಿಯಂತ್ರಿತ ಬೆಂಬಲವನ್ನು ನೀಡಲಾಗುತ್ತಿದೆ ಎಂಬುದನ್ನು ಹೊರತುಪಡಿಸಿ, ಇದು ನಿಜಕ್ಕೂ ನಾಚಿಕೆಗೇಡಿನ ಸಂಗತಿಯಾಗಿದೆ" ಎಂದು ಬರೆದುಕೊಂಡಿದ್ದಾರೆ.

ಗಾಜಾದಲ್ಲಿ ಇಸ್ರೇಲ್‌ನ ಕ್ರಮಗಳನ್ನು ಬೆಂಬಲಿಸಿದ್ದಕ್ಕಾಗಿ ಪ್ರಿಯಾಂಕಾ ಗಾಂಧಿ ಅಂತರಾಷ್ಟ್ರೀಯ ಸಮುದಾಯವನ್ನು ತರಾ-ಟೆಗೆ ತೆಗೆದುಕೊಂಡಿರುವುದು ಇದೇ ಮೊದಲಲ್ಲ.

ಫೆಬ್ರವರಿಯಲ್ಲಿ, ಕಾಂಗ್ರೆಸ್ ನಾಯಕಿಯು ನ್ಯಾಯ, ಮಾನವೀಯತೆ ಮತ್ತು ಅಂತರಾಷ್ಟ್ರೀಯ ಸಭ್ಯತೆಯ ಎಲ್ಲಾ ನಿಯಮಗಳನ್ನು ಮುರಿಯಲಾಗಿದೆ ಮತ್ತು ಗಾಜಾದಲ್ಲಿ "ಜನಾಂಗೀಯ ಹತ್ಯೆಗೆ ಕುರುಡಾಗಿದೆ" ಎಂದು ಅಂತರರಾಷ್ಟ್ರೀಯ ಸಮುದಾಯವನ್ನು ಆರೋಪಿಸಿದರು.

# ಸ್ವಪಕ್ಷದ ವಿರುದ್ಧವೇ ಅಸಮಾಧಾನ ಹೊರ ಹಾಕಿದ ಅರವಿಂದ ಲಿಂಬಾವಳಿ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ವಿಧಾನಸಭೆಯಲ್ಲಿ ವಿರೋಧ ಪಕ್ಷವಾಗಿ ಬಿಜೆಪಿ ಆಡಳಿತ ಪಕ್ಷವನ್ನು ಎದುರಿಸುವಲ್ಲಿ ಸಂಪೂರ್ಣ ವಿಫಲವಾಗಿದೆ ಎಂದು ಮಾಜಿ ಸಚಿವ, ಬಿಜೆಪಿಯ ಹಿರಿಯ ನಾಯಕ ಅರವಿಂದ ಲಿಂಬಾವಳಿ ಕಿಡಿಕಾರಿದ್ದಾರೆ.

ವಿಧಾನನ ಮಂಡಲದ ಮುಂಗಾರು ಅಧಿವೇಶನ ಮುಕ್ತಾಯಗೊಂಡ ಬೆನ್ನಲ್ಲೇ ಎಕ್ಸ್‌ನಲ್ಲಿ ಸುದೀರ್ಘ ಬರಹ ಬರೆದು ಅಸಮಾಧ ಹೊರಹಾಕಿರುವ ಲಿಂಬಾವಳಿ ಆಡಳಿತ ಪಕ್ಷದ ಜೊತೆ ಬಿಜೆಪಿ ನಾಯಕರು ಕೈ ಜೋಡಿಸಿದ್ದಾರೆ ಎಂದು ಆರೋಪಿಸಿದ್ದಾರೆ.

"ರಾಜ್ಯ ವಿಧಾನಮಂಡಲದ ಮುಂಗಾರು ಅಧಿವೇಶನ ಮುಕ್ತಾಯವಾಗಿದೆ. ರಾಜ್ಯ ಸರ್ಕಾರದ ವೈಫಲ್ಯಗಳನ್ನು ಎತ್ತಿ ಹಿಡಿದು ಜನರ ಧ್ವನಿಯಾಗಬೇಕಿದ್ದ ಬಿಜೆಪಿ ವಿರೋಧ ಪಕ್ಷವಾಗಿ ಅದನ್ನು ಮಾಡುವಲ್ಲಿ ಸಂಪೂರ್ಣ ವಿಫಲವಾಗಿದೆ. ಸದನದಲ್ಲಿ ಸರ್ಕಾರದ ಅವ್ಯವಹಾರ, ದುರಾಡಳಿತ, ವೈಫಲ್ಯಗಳನ್ನು ಎತ್ತಿ ಹಿಡಿಯಲು ಅವಕಾಶವಿದ್ದರೂ ನಮ್ಮ ನಾಯಕರು ಈ ಅವಕಾಶವನ್ನು ಬಳಸಿಕೊಳ್ಳುವಲ್ಲಿ ಸಂಪೂರ್ಣ ವಿಫಲರಾಗಿದ್ದಾರೆ" ಎಂದು ಲಿಂಬಾವಳಿ ಹೇಳಿದ್ದಾರೆ.

"ಐಟಿ-ಬಿಟಿ ರಾಜಧಾನಿ ಎಂದೇ ಕರೆಸಿಕೊಳ್ಳುವ, ವಿಜ್ಞಾನ ಕ್ಷೇತ್ರದಲ್ಲಿ ದೇಶಕ್ಕೆ ಮಾದರಿಯಾಗಿರುವ ಬೆಂಗಳೂರು ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಡೆಂಗ್ಯೂ ಹಾವಳಿ ಹೆಚ್ಚಾಗಿದೆ. ರಾಜ್ಯದ ಹಲವು ಜಿಲ್ಲೆಗಳಲ್ಲಿ ಅತಿವೃಷ್ಟಿ ಮತ್ತು ಪ್ರವಾಹದಿಂದಾಗಿ ಲಕ್ಷಾಂತರ ಜನರು ಮನೆ ಕಳೆದುಕೊಂಡಿದ್ದಾರೆ. ನಮ್ಮ ಪಕ್ಷದ ನಾಯಕರಿಗೆ ಈ ಬಗ್ಗೆ ಬೆಳಕು ಚೆಲ್ಲಬೇಕು ಮತ್ತು ರಾಜ್ಯದ ಜನರ ಸಂಕಷ್ಟಗಳನ್ನು ಪ್ರತಿನಿಧಿಸಬೇಕು ಎಂದು ಅನಿಸದಿರುವುದು ವಿಷಾದನೀಯ! ಹಿಂದಿನ ವರ್ಷದ ಬರ ಪರಿಹಾರ ಕೂಡ ಬರದ ಮುನ್ನ ಎಷ್ಟೋ ರೈತರಿಗೆ ತಲುಪಿಲ್ಲ. ಆದರೆ ವಿರೋಧ ಪಕ್ಷದ ನಾಯಕರು ಈ ಬಗ್ಗೆ ಮಾತನಾಡಿಲ್ಲ" ಎಂದಿದ್ದಾರೆ.

# ರಾಮನಗರ ಜಿಲ್ಲೆ ಬದಲಾವಣೆಗೆ ಶ್ರೀರಾಮ ಸೇನೆ ಖಂಡನೆ

■ ವಿಜಯಸಾಕ್ಷಿ ಸುದ್ದಿ, ಗದಗ




ರಾಮನಗರ ಜಿಲ್ಲೆಯನ್ನು ದಕ್ಷಿಣ ಬೆಂಗಳೂರು ಜಿಲ್ಲೆಯನ್ನಾಗಿ ನಾಮಕರಣ ಮಾಡಿರುವುದನ್ನು ಶ್ರೀರಾಮ ಸೇನೆ ಖಂಡಿಸುತ್ತದೆ ಎಂದು ಶ್ರೀರಾಮ ಸೇನೆ ಮುಖ್ಯಸ್ಥ ಪ್ರಮೋದ ಮುತಾಲಿಕ ಹೇಳಿದರು.

ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಸ್ವಾತಂತ್ರ್ಯ ನಂತರ ಕಾಂಗ್ರೆಸ್ ಪಕ್ಷವು ಒಡೆದು ಆಳುವ ನೀತಿ ಅನುಸರಿಸುತ್ತಿದೆ. ಬೆಂಗಳೂರು ನಗರದಲ್ಲಿ 32 ಸ್ಥಳದಲ್ಲಿ ಬ್ರಿಟೀಷರ ಹೆಸರಿವೆ. ಕರ್ಜನ್ ರೋಡ್, ಕಬ್ಬನ್ ಪಾರ್ಕ್, ಚರ್ಚ್ ಸ್ಟ್ರೀಟ್ ಸೇರಿದಂತೆ ಹಲವರ ಹೆಸರಿವೆ. ಅದನ್ನು ಬದಲಾಯಿಸಿ. ಡಿ.ಕೆ. ಶಿವಕುಮಾರ ಅವರು ತಮ್ಮ ಹೆಸರನ್ನು ಡಿ.ಕೆ. ಶರೀಫ್ ಎಂದು ಬದಲಾಯಿಸಿಕೊಳ್ಳಬೇಕು. ಬದಲಾಗಿ ಐತಿಹಾಸಿಕ ಸ್ಥಳ ಇರುವ ರಾಮ ನಗರವನ್ನು ಬದಲಾಯಿಸದ್ದೇಕೆ ಎಂದು ಪ್ರಶ್ನಿಸಿದರು.

ಬೆಂಗಳೂರಿನ ರೈಲ್ವೆ ನಿಲ್ದಾಣದಲ್ಲಿ 4.5 ಟನ್ ನಾಯಿಯ ಮಾಂಸ ದೊರೆತಿದೆ. ಬಾಕ್ಸ್ ಮೇಲೆ ಮೀನಿನ ಮಾರಾಟ ಎಂದು ಬರೆಯಲಾಗಿದೆ. ರಾಜಸ್ಥಾನದ ಜೈಪುರದಿಂದ ಬೆಂಗಳೂರಿಗೆ ಕಳೆದ ಕಳೆದ 15 ವರ್ಷದಿಂದ ಈ ಸಾಗಾಟದ ದಂಧೆ ನಡೆಯುತ್ತಿದೆ. ಬಿಬಿಎಂಪಿ ಅಧಿಕಾರಿಗಳನ್ನು ಸರ್ಕಾರ ಅಮಾನತು ಮಾಡಬೇಕು ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪತ್ರಿಕಾಗೋಷ್ಠಿಯಲ್ಲಿ ರಾಜು ಖಾನಪ್ಪನವರ, ಶಿವಯೋಗಿ ಹಿರೇಮಠ ಇತರರು ಇದ್ದರು.

# ಪೊಲೀಸರ ಕರ್ತವ್ಯಕ್ಕೆ ಅಡ್ಡಿ ಆರೋಪ : ಪುನೀತ್ ಕೆರೆಹಳ್ಳಿ ಬಂಧನ, ಠಾಣೆಯಲ್ಲಿ ಅಸ್ವಸ್ಥ-ಆಸ್ಪತ್ರೆಗೆ ದಾಖಲು

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ಪೊಲೀಸರ ಕರ್ತವ್ಯಕ್ಕೆ ಅಡ್ಡಿಪಡಿಸಿದ ಹಾಗೂ ಶಾಂತಿ ಸುವ್ಯವಸ್ಥೆಗೆ ಭಂಗ ತಂದ ಆರೋಪದ ಮೇಲೆ ನಿನ್ನೆ (ಜು.26) ರಾತ್ರಿ ಬಂಧನಕ್ಕೊಳಗಾದ ರೌಡಿ ಶೀಟರ್ ಪುನೀತ್ ಕೆರೆಹಳ್ಳಿ ಪೊಲೀಸ್ ಠಾಣೆಯಲ್ಲಿ ಅಸ್ವಸ್ಥಗೊಂಡಿದ್ದಾನೆ ಎನ್ನಲಾಗಿದ್ದು, ಆತನನ್ನು ವಿಕ್ಟೋರಿಯಾ ಆಸ್ಪತ್ರೆಗೆ ದಾಖಲಿಸಲಾಗಿದೆ.

ಕುರಿ ಮಾಂಸದ ಜೊತೆ ನಾಯಿ ಮಾಂಸವನ್ನು ರಾಜಸ್ಥಾನದಿಂದ ಬೆಂಗಳೂರಿಗೆ ತಂದು ಮಾರಾಟ ಮಾಡುತ್ತಿದ್ದಾರೆ ಎಂದು ಆರೋಪಿಸಿ ಪುನೀತ್ ಕೆರೆಹಳ್ಳಿ ಮತ್ತು ತಂಡ ಬೆಂಗಳೂರಿನ ಮೆಜೆಸ್ಟಿಕ್ ರೈಲು ನಿಲ್ದಾಣದ ಬಳಿ ಪ್ರತಿಭಟಿಸಿದ್ದರು. ಈ ವೇಳೆ ಕರ್ತವ್ಯಕ್ಕೆ ಅಡ್ಡಿಪಡಿಸಿದ ಆರೋಪದ ಮೇಲೆ ಪುನೀತ್ ಕೆರೆಹಳ್ಳಿಯನ್ನು ಪೊಲೀಸರು ಬಂಧಿಸಿದ್ದರು. ಆತನ ವಿರುದ್ಧ ಬಿಎನ್‌ಎಸ್‌ನ ಸೆಕ್ಷನ್ 132 (ಸರ್ಕಾರಿ ನೌಕರರ ಕೆಲಸಕ್ಕೆ ಅಡ್ಡಿ) ಮತ್ತು ಸೆಕ್ಷನ್ 351 (2) (ಶಾಂತಿಭಂಗ) ಅಡಿ ಪ್ರಕರಣ ದಾಖಲಿಸಲಾಗಿದೆ.

ಅಬ್ದುಲ್ ರಝಾಕ್ ಎಂಬವರು ರಾಜಸ್ಥಾನದಿಂದ ಕುರಿ ಮಾಂಸ ತರಿಸಿ ಬೆಂಗಳೂರಿನ ಹೋಟೆಲ್‌ಗಳಿಗೆ ಸರಬರಾಜು ಮಾಡುತ್ತಿದ್ದರು.

ನಿನ್ನೆ ಮೆಜೆಸ್ಟಿಕ್ ರೈಲು ನಿಲ್ದಾಣಕ್ಕೆ ಮಾಂಸ ತಲುಪಿದಾಗ, ಅದರಲ್ಲಿ ನಾಯಿಮಾಂಸ ಬೆರೆಸಲಾಗಿದೆ ಎಂದು ಆರೋಪಿಸಿ ಪುನೀತ್ ಮತ್ತು ಆತನ ತಂಡ ಪ್ರತಿಭಟನೆ ನಡೆಸಿತ್ತು.

ಈ ವೇಳೆ ರಝಾಕ್ ಮತ್ತು ಪುನೀತ್ ತಂಡದ ನಡುವೆ ವಾಗ್ವಾದ ನಡೆದಿದೆ ಎಂದು ತಿಳಿದು ಬಂದಿದೆ.

ಈ ವಿಷಯ ತಿಳಿದು ಸ್ಥಳಕ್ಕೆ ಬಂದ ಪೊಲೀಸರು ಪುನೀತ್ ಕೆರೆಹಳ್ಳಿಯನ್ನು ಬಂಧಿಸಿ ಕರೆದೊಯ್ದಿದ್ದಾರೆ. ಇದೇ ವೇಳೆ ಬಿಬಿಎಂಪಿ ಆಹಾರ ಸುರಕ್ಷತೆಯ ಅಧಿಕಾರಿಗಳು ಮಾಂಸದ ಮಾದರಿ ತೆಗೆದುಕೊಂಡು ಹೋಗಿದ್ದು, ಅದರಲ್ಲಿ ನಾಯಿ ಮಾಂಸ ಇದೆಯಾ? ಎಂದು ಪರಿಶೀಲಿಸಿ ಹೇಳಲಿದ್ದಾರೆ ಎಂದು ತಿಳಿದು ಬಂದಿದೆ.

ಕಾಟನ್‌ಪೇಟೆ ಪೊಲೀಸರು ಪುನೀತ್ ಕೆರೆಹಳ್ಳಿಯನ್ನು ರಾತ್ರಿ 12 ಗಂಟೆ ವೇಳೆಗೆ ಬಂಧಿಸಿದ್ದರು. ಠಾಣೆಯಲ್ಲಿ ಮಲಗಿದ್ದ ಪುನೀತ್, ಮುಂಜಾನೆ 4:45ರ ವೇಳೆಗೆ ಅಸ್ವಸ್ಥಗೊಂಡಿದ್ದಾನೆ ಎನ್ನಲಾಗಿದ್ದು, ಆತನನ್ನು ಕೆ.ಸಿ ಜನರಲ್ ಆಸ್ಪತ್ರೆಗೆ ಕರೆದೊಯ್ದು ಚಿಕಿತ್ಸೆ ನೀಡಲಾಗಿದೆ. ಬಳಿಕ ವಿಕ್ಟೋರಿಯಾ ಆಸ್ಪತ್ರೆಗೆ ದಾಖಲಿಸಲಾಗಿದೆ. ಊಟ ಮಾಡದ ಕಾರಣ ಆತ ಅಸ್ವಸ್ಥನಾಗಿದ್ದಾನೆ ಎಂದು ವರದಿಗಳು ಹೇಳಿವೆ.

# ಬಜೆಟ್‌ನಲ್ಲಿ ತಾರತಮ್ಯ : ನೀತಿ ಆಯೋಗದ ಸಭೆ ಬಹಿಷ್ಕರಿಸಿದ 7 ರಾಜ್ಯಗಳು

■ ವಿಜಯಸಾಕ್ಷಿ ಸುದ್ದಿ, ನವದೆಹಲಿ



ಕೇಂದ್ರ ಬಜೆಟ್‌ನಲ್ಲಿ ತಾರತಮ್ಯ ಎಸಗಲಾಗಿದೆ ಎಂದು ಆರೋಪಿಸಿ ಇಂದು (ಜು.27) ನಡೆಯಲಿರುವ ನೀತಿ ಆಯೋಗದ ಸಭೆಗೆ ಕರ್ನಾಟಕ ಸಹಿತ ಏಳು ರಾಜ್ಯಗಳು ಬಹಿಷ್ಕಾರ ಹಾಕಿವೆ.

ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ, ಹಿಮಾಚಲ ಪ್ರದೇಶದ ಸುಖವಿಂದರ್ ಸಿಂಗ್ ಸುಖು, ತೆಲಂಗಾಣದ ಎ. ರೇವಂತ್ ರೆಡ್ಡಿ, ತಮಿಳುನಾಡಿನ ಎಂ.ಕೆ ಸ್ಟಾಲಿನ್, ಕೇರಳದ ಪಿಣರಾಯಿ ವಿಜಯನ್ ಮತ್ತು ಪಂಜಾಬ್‌ನ ಮುಖ್ಯಮಂತ್ರಿ ಭಗವಂತ್ ಮಾನ್ ಸಭೆಗೆ ಹಾಜರಾಗುವುದಿಲ್ಲ ಎಂದು ತಿಳಿಸಿದ್ದಾರೆ.

ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ನ್ಯಾಯಾಂಗ ಬಂಧನದಲ್ಲಿರುವ ಕಾರಣ ಅವರು ಸಭೆಗೆ ಹಾಜರಾಗುವುದು ಅಸಾಧ್ಯವಾಗಿದೆ. ಆದರೆ, ದೆಹಲಿ ಸರ್ಕಾರ ಕೂಡ ಸಭೆಯನ್ನು ಬಹಿಷ್ಕರಿಸಿದೆ.

'ವಿಕಸಿತ ಭಾರತ @ 2047' ಎಂಬುವುದು ಈ ವರ್ಷದ ನೀತಿ ಆಯೋಗದ ಥೀಮ್ ಆಗಿದೆ. ಕೇಂದ್ರ ಸರ್ಕಾರ 'ಮೇಕಿಂಗ್ ಇಂಡಿಯಾ'ಕ್ಕೆ ಹೆಚ್ಚು ಒತ್ತು ಕೊಡುವ ಗುರಿ ಹೊಂದಿದೆ.

ಮಮತಾ, ಸೊರೇನ್ ಭಾಗಿ?

ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಮತ್ತು ಜಾರ್ಖಂಡ್ ಮುಖ್ಯಮಂತ್ರಿ ಹೇಮಂತ್ ಸೊರೇನ್ ನೀತಿ ಆಯೋಗದ ಸಭೆಯಲ್ಲಿ ಪಾಲ್ಗೊಂಡು ಬಜೆಟ್‌ನಲ್ಲಿ ತಾರತಮ್ಯದ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಮುಂದೆ ಪ್ರತಿಭಟನೆ ವ್ಯಕ್ತಪಡಿಸಲಿದ್ದಾರೆ ಎಂದು ಹೇಳಲಾಗಿದೆ. ಸಭೆಯಲ್ಲಿ ಪಾಲ್ಗೊಳ್ಳುವ ಸಲುವಾಗಿ ಮಮತಾ ಬ್ಯಾನರ್ಜಿ ಗುರುವಾರವೇ ದೆಹಲಿಗೆ ತೆರಳಬೇಕಿತ್ತು. ಆದರೆ, ಕೊನೆಯ ಕ್ಷಣದಲ್ಲಿ ಅವರು ಪ್ರಯಾಣ ರದ್ದುಗೊಳಿಸಿದ್ದಾರೆ. ಹಾಗಾಗಿ, ಸಭೆಯಲ್ಲಿ ಭಾಗಿಯಾಗುತ್ತಾರೋ, ಇಲ್ಲವೋ ಎಂಬುವುದು ಖಚಿತವಾಗಿಲ್ಲ.

ನೀತಿ ಆಯೋಗ ರದ್ದತಿಗೆ ಮಮತಾ ಬ್ಯಾನರ್ಜಿ ಆಗ್ರಹ : ನೀತಿ ಆಯೋಗವನ್ನು ರದ್ದುಪಡಿಸಿ ಈ ಹಿಂದಿನ ಯೋಜನಾ ಆಯೋಗವನ್ನು ಮರುಸ್ಥಾಪಿಸಬೇಕು ಎಂದು ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಆಗ್ರಹಿಸಿದ್ದಾರೆ.

ನೀತಿ ಆಯೋಗ ಆಧಾರರಹಿತವಾಗಿದೆ. ಅದು ಕೇವಲ ಸಭೆಗಳನ್ನು ನಡೆಸುವುದಕ್ಕಷ್ಟೇ ಸೀಮಿತವಾಗಿದೆ ಎಂದು ದೂರಿದ್ದಾರೆ.

## ವಿದ್ಯಾರ್ಥಿಗಳ ಬಿಳ್ಕೊಡುಗೆ, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪಾರಿತೋಷಕ ವಿತರಣೆ

# ನಿರಂತರ ಅಭ್ಯಾಸದಿಂದ ಸಾಧನೆ ಸಾಧ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿ ಜೀವನದ ಆಧಾರದ ಮೇಲೆ ಅವರ ಭಾವೀ ಭವಿಷ್ಯ ನಿರ್ಧಾರವಾಗಲಿದ್ದು, ವಿದ್ಯಾರ್ಥಿಗಳು ಈ ಸಮಯದಲ್ಲಿ ನಿರಂತರ ಅಭ್ಯಾಸ ಮಾಡುವುದರಿಂದ ಉತ್ತಮ ಅಂಕಗಳನ್ನು ಗಳಿಸಲು ಸಾಧ್ಯವಾಗುತ್ತದೆ ಎಂದು ಗದಗ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ಜಿಲ್ಲಾ ಅಧಿಕಾರಿ ರವಿ ಗುಂಜೀಕರ ಕಿವಿಮಾತು ಹೇಳಿದರು.

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಗದಗ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ಬಾಲಕ ವಸತಿ ನಿಲಯದ ಬಾಲಕರ ವಾರ್ಷಿಕ ಸ್ನೇಹ ಸಮ್ಮೇಳನ ಹಾಗೂ ಅಂತಿಮ ವರ್ಷದ ವಿದ್ಯಾರ್ಥಿಗಳ ಬಿಳ್ಕೊಡುಗೆ ಸಮಾರಂಭದಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪಾರಿತೋಷಕ ವಿತರಿಸಿ ಅವರು ಮಾತನಾಡಿದರು.



ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಶೈಕ್ಷಣಿಕವಾಗಿ ಸಮುದಾಯದ ಮುಖ್ಯವಾಹಿನಿಗೆ ಕರೆತರಲು ಸರಕಾರ ಹಲವಾರು ಯೋಜನೆಗಳನ್ನು ಅನುಷ್ಠಾನಗೊಳಿಸಿದೆ. ಪ್ರತಿಭಾವಂತ ವಿದ್ಯಾರ್ಥಿಗಳು ದೇಶ, ವಿದೇಶದಲ್ಲಿ ಉನ್ನತ ವ್ಯಾಸಂಗವನ್ನು ಪೂರೈಸುವ ಸಲುವಾಗಿ 10 ಲಕ್ಷ ರೂಗಳವರೆಗೂ ಶೈಕ್ಷಣಿಕ ಸಾಲ ನೀಡುವ ಯೋಜನೆ ಜಾರಿಯಲ್ಲಿದೆ. ವಿದ್ಯಾರ್ಥಿಗಳ ಉಜ್ವಲ ಭವಿಷ್ಯಕ್ಕಾಗಿ ಐಎಎಸ್, ಕೆಎಎಸ್ ತರಬೇತಿಗಳನ್ನು ಹಿಂದುಳಿದ ವರ್ಗಗಳ ಇಲಾಖೆಯಿಂದ ನೀಡುತ್ತಿದ್ದು, ಈ ತರಬೇತಿಯ ಸದುಪಯೋಗ ಪಡೆದು ಉಜ್ವಲ ಭವಿಷ್ಯವನ್ನು ನಿರ್ಮಿಸಿಕೊಳ್ಳಿ ಎಂದರು.

ಪ್ರಾಚಾರ್ಯರಾದ ಎಮ್.ಜಿ. ಗವಾನಿ, ಜಿ.ಟಿ. ಪಾಟೀಲ್, ಜೈ ಹನುಮಾನ ಎಚ್.ಕೆ, ಡಾ. ಬಿ.ಬಿ. ಹೊಳಗುಂದಿ, ಡಾ. ವಿ.ಎ. ಹಿತ್ತಲಮನಿ, ವಸತಿ ನಿಲಯ ಮೇಲ್ವಿಚಾರಕಿ ಶೋಭಾ ಆಲೂರು, ಮಲ್ಲಿಕಾರ್ಜುನಗೌಡ ಪಾಟೀಲ್, ಅಶೋಕ ತುರಮುಂದಿ ಸಾಂದರ್ಭಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಪತ್ರಕರ್ತ ಸುನೀಲಸಿಂಗ್ ಲದ್ದಿಗೇರಿ ಹಾಜರಿದ್ದರು.

ಅಧ್ಯಕ್ಷತೆ ವಹಿಸಿದ್ದ ಗದಗ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲೂಕಾಧಿಕಾರಿ ಡಾ. ಬಸವರಾಜ ಬಳ್ಳಾರಿ ಮಾತನಾಡಿ, ಹಿಂದೆ ಗುರು ಮುಂದೆ ಗುರಿಯನ್ನಿಟ್ಟುಕೊಂಡು ಮುನ್ನಡೆದರೆ ಭವಿಷ್ಯದಲ್ಲಿ ಉತ್ತಮ ಬದುಕು ಕಟ್ಟಿಕೊಳ್ಳಬಹುದು. ಹರ ಮುನಿದರೂ ಗುರು ಕಾಯುವನು, ಗುರುವಿನಲ್ಲಿ ಅಷ್ಟೊಂದು ಶಕ್ತಿ ಅಡಗಿದೆ. ಗುರುವಿನೊಂದಿಗೆ ಶ್ರದ್ಧಾ-ಭಕ್ತಿಯಿಂದ ನಡೆದರೆ ಬೇಕಾದ ಸಾಧನೆ ಮಾಡಬಹುದೆನ್ನುವುದಕ್ಕೆ ಅನೇಕ ನಿದರ್ಶನಗಳಿವೆ ಎಂದರು.

ಧರ್ಮೋತ್ತೇಜಕ ಸಂಗಮ ಸಮಾವೇಶದ ಸಮಾರೋಪದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಧರ್ಮವಿಲ್ಲದೆ ಬದುಕಿಗೆ ಅರ್ಥವಿಲ್ಲ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಮನುಷ್ಯನಿಗೆ ಹೆತ್ತ ತಾಯಿ, ಹೊತ್ತ ನೆಲ ಎಷ್ಟು ಮುಖ್ಯವೋ ಅಷ್ಟೇ ಧರ್ಮವೂ ಮುಖ್ಯ. ಶಿವಾಗಮಗಳ ಸಾಹಿತ್ಯ ಮತ್ತು ವಚನ ಸಾಹಿತ್ಯ ವೀರಶೈವ ಧರ್ಮದ ಅಮೂಲ್ಯ ಸಂಪತ್ತು ಎಂಬುದನ್ನು ಯಾರೂ ಮರೆಯಬಾರದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ವಿಜಯನಗರದ ಶ್ರೀ ಬಸವೇಶ್ವರ ಸುಜ್ಞಾನ ಮಂಟಪದಲ್ಲಿ ಶ್ರೀಮದ್ವೀರಶೈವ ಸದ್ಬೋಧನಾ ಸಂಸ್ಥೆ ಬೆಂಗಳೂರು ಜಿಲ್ಲಾ ಘಟಕದ ಆಶ್ರಯದಲ್ಲಿ ಜರುಗಿದ ಧರ್ಮೋತ್ತೇಜಕ ಸಂಗಮ ಸಮಾವೇಶದ ಸಮಾರೋಪ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಧರ್ಮದಲ್ಲಿ ಮಾರ್ಗವಿದೆ ವೇಗವಿಲ್ಲ. ವಿಜ್ಞಾನದಲ್ಲಿ ವೇಗವಿದೆ ಮಾರ್ಗವಿಲ್ಲ. ಇವೆರಡರ ಸಮನ್ವಯದಿಂದ ಜನಕಲ್ಯಾಣ ಸಾಧ್ಯವಾಗುತ್ತದೆ. ಧರ್ಮದ ದಿಕ್ಸೂಚಿ ಇಲ್ಲದೇ ಹೋದರೆ ಬದುಕಿಗೆ ಅರ್ಥವೇ ಇಲ್ಲ. ಧರ್ಮ ದರ್ಶನಗಳ ಅರಿವು ಮತ್ತು ಆಚರಣೆ ಮುಖ್ಯ. ಅಧಿಕಾರದ ಅಂತಸ್ತು ಮೇಲೇರಿದಂತೆ ನೀತಿಯ ಅಂತಸ್ತು ಮೇಲೇರಬೇಕು. ಮನುಷ್ಯನ ವ್ಯಕ್ತಿತ್ವ ವಿಕಾಸಕ್ಕೆ ಶಿವಾಗಮಗಳ ಪ್ರಾಚೀನ ಸಾಹಿತ್ಯ ಹಾಗೂ ಶರಣರ ವಚನ ಸಾಹಿತ್ಯ ಎರಡು ಕಣ್ಣು ಇದ್ದಂತೆ. ಈ ಧರ್ಮದ ದಾರ್ಶನಿಕತೆ ಸರ್ವ ಜನಾಂಗಕ್ಕೂ ದಾರಿದೀಪ. ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ಸಿದ್ಧಾಂತ ಶಿಖಾಮಣಿಯಲ್ಲಿ ಜೀವಾತ್ಮ ಪರಮಾತ್ಮನಾಗಲು ಅಂಗ ಲಿಂಗವಾಗಲು ಮತ್ತು ಭವಿ ಭಕ್ತನಾಗುವ ಆದರ್ಶತೆಗಳನ್ನು ಕಾಣಬಹುದೆಂದರು.




ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸಿದ್ದರು. ರಾಜಾಪುರ ಸಂಸ್ಥಾನಮಠದ ಡಾ.ರಾಜೇಶ್ವರ ಶಿವಾಚಾರ್ಯ ಸ್ವಾಮಿಗಳು ಪ್ರಾಸ್ತಾವಿಕ ಮಾತನಾಡಿದರೆ, ನಾಗಲಾಪುರ ಮಠದ ತೇಜೇಶಲಿಂಗ ಶಿವಾಚಾರ್ಯ ಸ್ವಾಮಿಗಳು ಸದಾಶಯ ನುಡಿ ಹಂಚಿಕೊಂಡರು. ಸಂಗೊಳ್ಳಿ, ದೊಡ್ಡಗುಣಿ, ಶ್ರೀಗಳು ಉಪಸ್ಥಿತರಿದ್ದರು.

ಸಿದ್ಧರಬೆಟ್ಟದ ವೀರಭದ್ರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿದರು. ಮುಖ್ಯ ಅತಿಥಿಗಳಾಗಿ ಅರಣ್ಯ ಸಚಿವ ಈಶ್ವರ ಖಂಡ್ರೆ, ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ, ಧಾರ್ಮಿಕ ದತ್ತಿ ಇಲಾಖೆ ಆಯುಕ್ತ ಬಸವ ರಾಜೇಂದ್ರ, ಜಿ.ಮರಿಸ್ವಾಮಿ ಪಾಲ್ಗೊಂಡಿದ್ದರು.

ನಿವೃತ್ತ ಸಂಸ್ಕೃತ ಪ್ರಾಧ್ಯಾಪಕರಾದ ಡಾ.ಸಿ. ಶಿವಕುಮಾರಸ್ವಾಮಿ ಅವರು ವೀರಶೈವ ಧರ್ಮದ ಮೌಲ್ಯಗಳ ಕುರಿತು ಉಪನ್ಯಾಸವನ್ನಿತ್ತರು. ಬೀರೂರು ಶಿವಸ್ವಾಮಿ, ಆರ್.ಆರ್. ಹಿರೇಮಠ ಇನ್ನಿತರರು ಇದ್ದರು.

ಕೇಂದ್ರ ಸರ್ಕಾರದ ಜಲಶಕ್ತಿ ಮತ್ತು ರೇಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಮಾತನಾಡಿ, ಧಾರ್ಮಿಕ ಮೌಲ್ಯಗಳು ಜೀವನದ ಉನ್ನತಿಗೆ ಮತ್ತು ಶ್ರೇಯಸ್ಸಿಗೆ ಕಾರಣವಾಗಿವೆ. ವೀರಶೈವ ಧರ್ಮದಲ್ಲಿ ಗಂಡು-ಹೆಣ್ಣು ಉಚ್ಛ-ನೀಚ ಮತ್ತು ಬಡವ-ಬಲ್ಲಿದ ಎನ್ನದೇ ಎಲ್ಲರಿಗೂ ಸಮಾನ ಅವಕಾಶ ಕಲ್ಪಿಸಿಕೊಟ್ಟಿದೆ. ವೀರಶೈವ ಧರ್ಮದ ಪೀಠ ಮತ್ತು ಮಠಗಳು ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಶ್ರಮಿಸುತ್ತಾ ಬಂದಿವೆ. ಮಾನವ ಧರ್ಮಕ್ಕೆ ಜಯವಾಗಲಿ-ಧರ್ಮದಿಂದಲೇ ವಿಶ್ವಕ್ಕೆ ಶಾಂತಿ, ಸಾಹಿತ್ಯ ಸಂಸ್ಕೃತಿ ಸಂವರ್ಧಿಸಲಿ-ಶಾಂತಿ ಸಮೃದ್ಧಿ ಎಲ್ಲರಿಗಾಗಲಿ ಅನ್ನುವ ಸಾರ್ವತ್ರಿಕ ಸತ್ಯವನ್ನು ಅರಿತು ಬಾಳಿದರೆ ಜೀವನದಲ್ಲಿ ಉತ್ಕರ್ಷತೆ ಕಾಣಬಹುದೆಂದರು.

ಶಿವಶಂಕರ ಶಾಸ್ತ್ರಿ ತಂಡದವರಿಂದ ಭಕ್ತಿಗೀತೆ ಜರುಗಿತು. ಕೈಗಾರಿಕೋದ್ಯಮಿ ಟಿ.ಎಸ್. ಉಮಾಶಂಕರ ಸ್ವಾಗತಿಸಿದರು. ಕನ್ನಡ ಹೋರಾಟಗಾರ ಫಾಲನೇತ್ರ ನಿರೂಪಿಸಿದರು. ಬಿಜ್ಜಳ್ಳಿ ನಂದೀಶ, ನಿರಂಜನ ಕೋವಾ ರೇವಣ್ಣ, ಎಂ.ಮಾದಯ್ಯ ಮತ್ತು ಸೋಮಶೇಖರ ಪಾಟೀಲ ದಾಸೋಹ ಸೇವೆ ನೆರವೇರಿಸಿದರು.

## ಲಕ್ಕುಂಡಿ ಅಭಿವೃದ್ಧಿ ಪ್ರಾಧಿಕಾರಕ್ಕೆ ಸಿದ್ದು ಪಾಟೀಲ ನೇಮಕ: ಸುಣಗಾರ ಅಭಿನಂದನೆ

■ವಿಜಯಸಾಕ್ಷಿ ಸುದ್ದಿ, ಗದಗ



ಗದಗ ಜಿಲ್ಲೆಯ ಗದಗ ತಾಲೂಕಿನ ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ರಾಜ್ಯಮಟ್ಟದ ಉನ್ನತ ಸಮಿತಿಗೆ ಗದಗ ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷರಾಗಿರುವ ಸಿದ್ದಲಿಂಗೇಶ್ವರ ಪಾಟೀಲ್ ಅವರಿಗೆ ಸದಸ್ಯರಾಗಿ ನೇಮಿಸಿರುವುದಕ್ಕೆ ಕಾಂಗ್ರೆಸ್ ಯುವನಾಯಕ ಕರೀಮಸಾಬ ಸುಣಗಾರ ಅವರು ಅಬಿನಂಧಿಸಿದ್ದಾರೆ.

ಹೇಳಿಕೆ ನೀಡಿರುವ ಅವರು, ಪ್ರವಾಸೋದ್ಯಮ ಹಾಗೂ ಕಾನೂನು ಸಚಿವರಾದ ಡಾ. ಎಚ್.ಕೆ.ಪಾಟೀಲ್ ಅವರು ಲಕ್ಕುಂಡಿಯನ್ನು ವಿಶ್ವ ಪ್ರವಾಸಿ ತಾಣಕ್ಕೆ ಸೇರಿಸುವ ಮೂಲಕ ವಿಶ್ವ ದರ್ಜೆಯನ್ನು ಕೊಡಲು ಇಚ್ಚಿಸಿ ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ರಚಿಸಿದ್ದಾರೆ. ಆ ಪ್ರಾಧಿಕಾರಕ್ಕೆ ಐತಿಹಾಸಿಕ ಪ್ರಗತಿಯ ಸುಂದರ ಮೆರುಗು ನೀಡುವ ಸದುದ್ದೇಶದಿಂದಾಗಿಯೇ ಯುವ ಉತ್ಸಾಹಿ ಮಾಜಿ ಜಿಪಂ ಅಧ್ಯಕ್ಷ ಸಿದ್ದಲಿಂಗೇಶ್ವರ ಪಾಟೀಲ್ ಅವರಿಗೆ ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ರಾಜ್ಯಮಟ್ಟದ ಉನ್ನತ ಸಮಿತಿಗೆ ಸದಸ್ಯರಾಗಿ ನೇಮಿಸಿದ್ದಾರೆ.

ಅವರ ಆಡಳಿತ ಅವಧಿಯಲ್ಲಿ ಲಕ್ಕುಂಡಿ ಉತ್ತರೋತ್ತರವಾಗಿ ಅಭಿವೃದ್ಧಿ ಕಂಡು ತನ್ನ ಐತಿಹಾಸಿಕ ಸೌಂದರ್ಯತೆಯ ಹಿನ್ನೆಲೆಯಲ್ಲಿ ಇಡಿ ವಿಶ್ವವನ್ನೇ ತನ್ನತ್ತ ಆಕರ್ಷಿಸಲಿ, ಅವರನ್ನು ಉನ್ನತ ಸಮಿತಿಗೆ ನೇಮಿಸಿರುವುದಕ್ಕೆ ಗದಗ ಜಿಲ್ಲೆಯ ಸಮಸ್ತ ಜನತೆಯ ಪರವಾಗಿ ಪ್ರವಾಸೋದ್ಯಮ ಸಚಿವ ಡಾ. ಎಚ್.ಕೆ.ಪಾಟೀಲ್ ಅವರಿಗೆ ಕಾಂಗ್ರೆಸ್ ಯುವನಾಯಕ ಕರೀಮಸಾಬ ಸುಣಗಾರ ಅಭಿನಂಧಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಡಾ. ಕೆ.ಬಿ. ಧನ್ನೂರ ಮಾಹಿತಿ

## ಬಸಮ್ಮ ತಾಯಿ ಸ್ಮರಣೋತ್ಸವದ ಕೃಷಿಗೋಷ್ಠಿ



■ವಿಜಯಸಾಕ್ಷಿ ಸುದ್ದಿ, ನರೇಗಲ್

ಜುಲೈ 31ರಂದು ಪಟ್ಟಣದ ಹಿರೇಮಠದ ಸಭಾಭವನದಲ್ಲಿ ರೋಣದ ಬಸಮ್ಮ ತಾಯಿ ಪಾಟೀಲ ಸ್ಮರಣೋತ್ಸವದ ಅಂಗವಾಗಿ ಕೃಷಿಗೋಷ್ಠಿ ಜರುಗಲಿದೆ ಎಂದು ಡಾ. ಕೆ.ಬಿ. ಧನ್ನೂರ ಹೇಳಿದರು.

ಪಟ್ಟಣದ ಪತ್ರಿಕಾಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿ, ರೋಣದ ಸಂಗನಗೌಡ ಪಾಟೀಲರ ಮನೆತನವು ಮೂಲತಃ ಕೃಷಿ ಮನೆತನ. ಕೃಷಿಯ ಬಗ್ಗೆ ಅಪಾರವಾದ ಕಾಳಜಿಯುಳ್ಳ ಬಸಮ್ಮ ತಾಯಿಯವರ ಸ್ಮರಣೋತ್ಸವದ ಅಂಗವಾಗಿ ನರೇಗಲ್ಲದಲ್ಲಿಯೂ ಒಂದು ಕೃಷಿ ಗೋಷ್ಠಿಯನ್ನು ಏರ್ಪಡಿಸಬೇಕೆಂಬ ಆಸೆ ನಮ್ಮೆಲ್ಲರದೂ ಆಗಿತ್ತು. ಅದು ಈ ಸಾರೆ ಕೈಗೂಡಿದ್ದಕ್ಕೆ ನಮಗೆ ಸಂತಸವಾಗಿದೆ ಎಂದು ಡಾ. ಧನ್ನೂರ ನುಡಿದರು.

ಕೃಷಿಗೋಷ್ಠಿಯ ದಿವ್ಯ ಸಾನ್ನಿಧ್ಯವನ್ನು ನರೇಗಲ್ ಹಿರೇಮಠದ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ವಹಿಸಲಿದ್ದು, ಅಧ್ಯಕ್ಷತೆಯನ್ನು ಕೆ.ಸಿ.ಸಿ ಬ್ಯಾಂಕ್‌ನ ಮಾಜಿ ಅಧ್ಯಕ್ಷ ಐ.ಎಸ್. ಪಾಟೀಲ ವಹಿಸಲಿದ್ದಾರೆ. ಧಾರವಾಡ ಕೃಷಿ ವಿಶ್ವವಿದ್ಯಾಲಯದ ಕುಲಪತಿ ಡಾ. ಪಿ.ಎಲ್. ಪಾಟೀಲ ಉದ್ಘಾಟಿಸಲಿದ್ದು, ಕೃಷಿ ಪಂಡಿತರಾದ ಗುರುನಾಥ ಓದುಗೌಡ್ರ, ಧಾರವಾಡದ ಕೃಷಿ ವಿಶ್ವವಿದ್ಯಾಲಯದ ನಿರ್ದೇಶಕ ಡಾ. ಬಿ.ಡಿ. ಬಿರಾದಾರ, ಡಾ. ಎಸ್.ಎಸ್. ಅಂಗಡಿ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಪ.ಪಂ ಸದಸ್ಯರಾದ ಮುತ್ತಪ್ಪ ನೂಲ್ಕಿ, ದಾವುದಲಿ ಕುದರಿ, ರಾಚಯ್ಯ ಮಾಲಗಿತ್ತಿಮಠ, ಬಸೀರಾಬಾನು ನದಾಫ್, ಪ್ರಗತಿಪರ ರೈತ ಬಸವರಾಜ ಕಳಕೊಣ್ಣವರ, ನಾಗಭೂಷಣ ಬೆಳವಡಿ, ಎನ್.ವೈ. ಜೋಗಿ, ಎಂ.ಎನ್. ಹುಲಕೋಟಿ, ಎ.ಎ. ನವಲಗುಂದ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ ಎಂದು ಡಾ. ಧನ್ನೂರ ಹೇಳಿದರು.

ಶಹರ ಕಾಂಗ್ರೆಸ್ ಘಟಕದ ಅಧ್ಯಕ್ಷ ಶಿವನಗೌಡ ಪಾಟೀಲ ಮಾತನಾಡಿ, ಈ ಕೃಷಿಗೋಷ್ಠಿ ಇಲ್ಲಿ ನಡೆಯುವದಕ್ಕಿಂತ ಮುಂಚೆ ರೋಟರಿ ಭವನದಲ್ಲಿ ರೈತರೊಂದಿಗೆ ಸಂವಾದ ಕಾರ್ಯಕ್ರಮ ಜರುಗಲಿದೆ. ಅದರಲ್ಲಿ ಎಲ್ಲ ರೈತರೂ ಪಾಲ್ಗೊಳ್ಳಬೇಕೆಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಎ.ಆರ್. ಮಲ್ಲನಗೌಡ್ರ, ಕಳಕನಗೌಡ ಪೊಲೀಸ್‌ಪಾಟೀಲ, ಮೈಲಾರಪ್ಪ ಚಳ್ಳಮರದ, ಸೋಮಶೇಖರ ಲಕ್ಕನಗೌಡ್ರ, ವೀರಪ್ಪ ಜಿರ್ಲ, ಅಲ್ಲಾಭಕ್ಷಿ ನದಾಫ್ ಸೇರಿದಂತೆ ಇನ್ನೂ ಅನೇಕ ಮುಖಂಡರು, ಸ್ಮರಣೋತ್ಸವ ಸಮಿತಿಯ ಸದಸ್ಯರಿದ್ದರು.

ಪುಣ್ಯ ಸ್ಮರಣೋತ್ಸವ ಸಮಿತಿಯ ಅಧ್ಯಕ್ಷ ಎಂ.ಎಸ್. ದಢೇಸೂರಮಠ ಮಾತನಾಡಿ, ಕೃಷಿ ಪ್ರಧಾನವಾದ ನಮ್ಮ ಭಾಗದಲ್ಲಿನ ರೈತರಿಗೆ ಅನುಕೂಲವಾಗಲೆಂದು ಈ ಕೃಷಿಗೋಷ್ಠಿಯನ್ನು ಹಮ್ಮಿಕೊಳ್ಳಲಾಗಿದೆ. ಸರಕಾರದಿಂದ ಕೃಷಿಕರಿಗೆ ಯಾವ ಯಾವ ಲಾಭಗಳಿವೆ ಎಂಬುದರ ಬಗ್ಗೆ ಈ ಗೋಷ್ಠಿಯಲ್ಲಿ ಉಪನ್ಯಾಸಕರು ವಿವರವಾದ ವಿವರಣೆಗಳನ್ನು ನೀಡಲಿದ್ದು, ಈ ಭಾಗದ ಕೃಷಿಕರು ಅಂದಿನ ಕೃಷಿಗೋಷ್ಠಿಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ಹೇಳಿದರು.

## ನೀಟ್-ಯುಜಿ ಪರಿಷ್ಕೃತ ಫಲಿತಾಂಶ ಪ್ರಕಟ ಟಾಪರ್‌ಗಳ ಸಂಖ್ಯೆ 61ರಿಂದ 17ಕ್ಕೆ ಇಳಿಕೆ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಸುಪ್ರೀಂ ಕೋರ್ಟ್ ನಿರ್ದೇಶನದ ನಂತರ ರಾಷ್ಟ್ರೀಯ ಪರೀಕ್ಷಾ ಸಂಸ್ಥೆ (ಎನ್‌ಟಿಎ) ಶುಕ್ರವಾರ ಪರಿಷ್ಕೃತ ನೀಟ್-ಯುಜಿ ಫಲಿತಾಂಶಗಳನ್ನು ಬಿಡುಗಡೆ ಮಾಡಿದ್ದು, ಟಾಪರ್‌ಗಳ ಸಂಖ್ಯೆ 61ರಿಂದ 17ಕ್ಕೆ ಇಳಿಕೆಯಾಗಿದೆ.

ಆರಂಭದಲ್ಲಿ ಟಾಪರ್‌ಗಳೆಂದು ಘೋಷಿಸಲ್ಪಟ್ಟಿದ್ದ 67 ಅಭ್ಯರ್ಥಿಗಳಲ್ಲಿ 44 ಮಂದಿ ಪೂರ್ಣ ಅಂಕ ಪಡೆದಿದ್ದರು. ಭೌತಶಾಸ್ತ್ರ ವಿಷಯಕ್ಕೆ ಗ್ರೇಸ್ ಅಂಕ ನೀಡಿದ್ದರಿಂದ ಪೂರ್ಣ ಅಂಕಗಳನ್ನು ಈ ಅಭ್ಯರ್ಥಿಗಳು ಗಳಿಸಿದ್ದರು.

ಬಳಿಕ ಕೆಲ ಕೇಂದ್ರಗಳಲ್ಲಿ ಸಮಯ ವ್ಯರ್ಥವಾಗಿದೆ ಎಂಬ ಕಾರಣಕ್ಕೆ ವಿದ್ಯಾರ್ಥಿಗಳಿಗೆ ನೀಡಲಾಗಿದ್ದ ಗ್ರೇಸ್ ಅಂಕಗಳನ್ನು ಹಿಂಪಡೆಯಲಾಗಿತ್ತು. ಇದರಿಂದ ಟಾಪರ್‌ಗಳ ಸಂಖ್ಯೆ 67ರಿಂದ 61ಕ್ಕೆ ಇಳಿಕೆಯಾಗಿತ್ತು. ಇದೀಗ ಪರಿಷ್ಕೃತ ನೀಟ್-ಯುಜಿ ಫಲಿತಾಂಶ ಪ್ರಕಟವಾದ ಬಳಿಕ ಟಾಪರ್‌ಗಳ ಸಂಖ್ಯೆ 61ರಿಂದ 17ಕ್ಕೆ ಇಳಿಕೆಯಾಗಿದೆ.

ಫಲಿತಾಂಶದ ಪ್ರಕಾರ ಟಾಪ್ ಸ್ಕೋರರ್‌ಗಳು 99.9992714 ಪ್ರತಿಶತದೊಂದಿಗೆ ಪರಿಪೂರ್ಣ 720 ಅಂಕಗಳನ್ನು ಪಡೆದಿದ್ದಾರೆ. ಪ್ರತಿ ಪ್ರಶ್ನೆಗೆ ಒಂದೇ ಒಂದು ನಿಖರವಾದ ಉತ್ತರವನ್ನು ಸ್ವೀಕರಿಸುವಂತೆ ಸುಪ್ರೀಂ ಕೋರ್ಟ್ ನೀಡಿದ ತೀರ್ಪಿನಿಂದಾಗಿ ಪರಿಷ್ಕೃತ ಫಲಿತಾಂಶದಲ್ಲಿ ಬದಲಾವಣೆ ಕಂಡುಬಂದಿದೆ.

## ಸಮಾಜಕ್ಕಾಗಿ ದುಡಿಯಲು ಶ್ರಮವಹಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ರಾಷ್ಟ್ರ ಪ್ರಗತಿಯಲ್ಲಿ ಯುವಕರ ಪಾತ್ರ ಅವಶ್ಯಕವಾಗಿದ್ದು, ಸೇವಾ ಮನೋಭಾವನೆಯನ್ನು ಬೆಳೆಸಿಕೊಳ್ಳಿ. ತಂದೆ-ತಾಯಿಯರ ಸೇವೆ ಮಾಡುವುದರೊಂದಿಗೆ ನಮಗಾಗಿ ಅಲ್ಲದೇ ಸಮಾಜಕ್ಕಾಗಿ ದುಡಿಯಲು ಶ್ರಮವಹಿಸಿ. ಪಠ್ಯ ಚಟುವಟಿಕೆಗಳೊಂದಿಗೆ ಪಠ್ಯೇತರ ಚಟುವಟಿಕೆಗಳಲ್ಲಿಯೂ ಪಾಲ್ಗೊಂಡು ಉತ್ತಮ ವ್ಯಕ್ತಿತ್ವ ರೂಪಿಸಿಕೊಳ್ಳಿ ಎಂದು ಸರ್ಕಾರಿ ಮಹಿಳಾ ಪದವಿ ಮಹಾವಿದ್ಯಾಲಯ ಪ್ರಾಚಾರ್ಯ ಎಮ್.ವಿ. ಹಿರೇಮಠ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.




ನಗರದ ಮನೋರಮಾಬಾಯಿ ಮೋಹನ್ ಕುಡತರಕರ್ ಫೌಂಡೇಶನ್‌ನ ಮನೋರಮಾ ಕಾಲೇಜಿನ ಬಿಕಾಂ ವಿದ್ಯಾರ್ಥಿಗಳ ವಾರ್ಷಿಕೋತ್ಸವ ಹಾಗೂ ಪಾರಿತೋಷಕ ವಿತರಣಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಪ್ರಾಚಾರ್ಯ ಬಿ.ಎಸ್ ಹಿರೇಮಠ ಮಾತನಾಡಿ, ವಿದ್ಯಾರ್ಥಿಗಳು ಸೃಜನಾತ್ಮಕತೆಯನ್ನು ಹೆಚ್ಚಿಸಿಕೊಳ್ಳಿ ಎಂದರು.

ವಿವಿಧ ಸಾಂಘಿಕ ಹಾಗೂ ಕ್ರೀಡಾ ಚಟುವಟಿಕೆಗಳಲ್ಲಿ ಸಾಧನೆಗೈದ ವಿದ್ಯಾರ್ಥಿಗಳಿಗೆ ಪಾರಿತೋಷಕ ವಿತರಣೆ ಮಾಡಲಾಯಿತು.ಸಭೆಯ ಅಧ್ಯಕ್ಷತೆಯನ್ನು ಸಂಸ್ಥೆಯ ಚೇರಮನ್ ಎನ್.ಎಮ್. ಕುಡತರಕರ ವಹಿಸಿದ್ದರು. ಈ ಸಂಧರ್ಭದಲ್ಲಿ ಆಡಳಿತಾಧಿಕಾರಿಗಳಾದ ಕಿಶೋರ ಮುದಗಲ್ಲ, ಸಂಸ್ಥೆಯ ನಿರ್ದೇಶಕರಾದ ಮಂಜುನಾಥ ಕುಡತರಕರ, ಸಂಜಯಕುಮಾರ ಕುಡತರಕರ, ಚೇತನ ಕುಡತರಕರ, ಸಂಯೋಜಕರಾದ ಪ್ರೊ. ಅಲ್ವಿನಾ ಡಿ, ಪ್ರೊ. ಚೈತ್ರಾ ಡಿ., ಪ್ರೊ. ಸವಿತಾ ಪೂಜಾರ, ಪಿಯುಸಿ ಸಂಯೋಜಕರಾದ ಪ್ರೊ. ಶಾಹಿದಾ ಶಿರಹಟ್ಟಿ ಹಾಗೂ ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

## ಇಂದು ಕಾರ್ಮಿಕರ ಸಮ್ಮೇಳನ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕೆಎಸ್ ಸಿಎಸ್‌ಸಿ ಗೋಡೌನ್‌ಗಳಲ್ಲಿ ಲೋಡಿಂಗ್ ಮತ್ತು ಅನ್‌ಲೋಡಿಂಗ್ ಮಾಡುವ ಕಾರ್ಮಿಕರ ಸಮಾವೇಶವು ಜು. 28 ರಂದು ಬೆಳಗ್ಗೆ 10 ಗಂಟೆಗೆ ನಗರದ ಎಪಿಎಂಸಿ ಆವರಣದಲ್ಲಿ ಏರ್ಪಡಿಸಲಾಗಿದೆ.

ಹಮಾಲರ ಸಂಘದ ರಾಜ್ಯಾಧ್ಯಕ್ಷ ಜಿ.ಆರ್. ಶಿವಶಂಕರ, ಜಿಲ್ಲಾಧ್ಯಕ್ಷ ಫಕ್ರುಸಾಬ್ ಗಟ್ಟದ ಇತರರು ಉಪಸ್ಥಿತಿ ಇರುವರು ಎಂದು ಪ್ರಕಟಣೆ ತಿಳಿಸಿದೆ.

## ಕೃಷಿ ಪಂಪ್‌ಸೆಟ್-ಆಧಾರ್ ಜೋಡಣೆಗೆ ವಿರೋಧ



■ವಿಜಯಸಾಕ್ಷಿ ಸುದ್ದಿ, ಮುಳಗುಂದ


ರಾಜ್ಯ ಸರಕಾರ ಹೊರಡಿಸಿರುವ ಕೃಷಿ ಪಂಪ್‌ಸೆಟ್‌ಗಳಿಗೆ ಆಧಾರ್ ಸಂಖ್ಯೆ ಜೋಡಣೆ ಆದೇಶವನ್ನು ವಿರೋಧಿಸಿ ಹಸಿರು ಸೇನೆ ರಾಜ್ಯ ಸಂಘ ಹಾಗೂ ಮುಳಗುಂದ ಘಟಕದ ಸದಸ್ಯರು ಹೆಸ್ಕಾಂ ಕಛೇರಿ ಅಧಿಕಾರಿ ಎಸ್.ಓ. ಸುಂಕದ ಅವರಿಗೆ ಮನವಿ ಸಲ್ಲಿಸಿದರು.

ರೈತ ಸಂಘದ ಅಧ್ಯಕ್ಷ ಬಸವರಾಜ ಕರಿಗಾರ ಮಾತನಾಡಿ, ರೈತರು ಈಗಾಗಲೇ ಸಂಕಷ್ಟದಲ್ಲಿದ್ದಾರೆ. ರಾಜ್ಯ ಸರಕಾರ ಕೂಡಲೇ ಈ ಆದೇಶವನ್ನು ಹಿಂಪಡೆಯಬೇಕು ಎಂದರು. ದೇವರಾಜ ಸಂಗನಪೇಟಿ, ದತ್ತಣ್ಣ ಯಳವತ್ತಿ, ಸೈಯದಲಿ ಶೇಖ, ಜಿ.ಎಂ. ಗಾಡಿ, ಮಾಹಾಂತೇಶ ಗುಂಜಳ, ಮುತ್ತಣ್ಣ ಬಳ್ಳಾರಿ, ದೇವಪ್ಪ ಅಣ್ಣಿಗೇರಿ, ಬಸವರಾಜ ಕೋಟಗಿ ಮುಂತಾದವರಿದ್ದರು.

## ಕಾರ್ಗಿಲ್ ಯೋಧರಿಗೆ ಶ್ರದ್ಧಾಂಜಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ ಗದಗ ಗ್ರಾಮೀಣ ಯುವ ಮೋರ್ಚಾ ಅಧ್ಯಕ್ಷ ಜಗದೀಶ ಚಿಂಚಲಿ ನೇತೃತ್ವದಲ್ಲಿ 25ನೇ ವರ್ಷದ ಕಾರ್ಗಿಲ್ ವಿಜಯೋತ್ಸವದ ಅಂಗವಾಗಿ ಪಂಜಿನ ಮೆರವಣಿಗೆ ನಡೆಸಿದರು.




ಈ ಸಂದರ್ಭದಲ್ಲಿ ಯುವ ಮೋರ್ಚಾ ಗದಗ ಜಿಲ್ಲಾಧ್ಯಕ್ಷ ಸಂತೋಷ ಅಕ್ಕಿ, ಗದಗ ಗ್ರಾಮೀಣ ಮಂಡಲ ಅಧ್ಯಕ್ಷ ದ್ಯಾಮಣ್ಣ ನೀಲಗುಂದ, ಬೂದಪ್ಪ, ವಾಯ್.ಪಿ. ಅಡ್ನೂರ, ಸುರೇಶ ಚವ್ಹಾಣ, ಅರವಿಂದ ಅಣ್ಣಿಗೇರಿ, ರವಿ ವಗ್ಗನವರ, ಮೋಹನ ಮದ್ದಿನ, ಹಳ್ಳಿ, ರಮೇಶ ಹೊನ್ನಳಿ, ಮಲ್ಲಪ್ಪ ಕಳಸಾಪೂರ, ಸಿದ್ದಪ್ಪ ಜೊಂಡಿ, ಮಹಾಂತೇಶ ನಿಂಗೋಜಿ, ವಾಸು ಕಣವಿ, ಕಿರಣ ಬಾತಾಖಾನಿ, ಮಂಜು ಕುಂಬಾರ, ಮಲ್ಲಪ್ಪ ಕಮ್ಮಾರ, ದೇವು ಕಮ್ಮಾರ, ಹರೀಶ ಮಲ್ಲಾರಿ, ಹನಮಂತ ಘೋಡ್ಕೆ, ಸಂಗಮೇಶ ಅಂಗಡಿ, ಸತ್ಯನಾರಾಯಣ ಘೋಡ್ಕೆ, ಶರಣು ಮಠದ ಮುಂತಾದವರಿದ್ದರು.

ಧರ್ಮೋತ್ತೇಜಕ ಸಂಗಮ ಸಮಾವೇಶದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಸುಖ-ದುಃಖಗಳು ಹಗಲು ರಾತ್ರಿಯಿದ್ದಂತೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಆಧುನಿಕ ಕಾಲದಲ್ಲಿ ಮಾನವೀಯ ಸಂಬಂಧಗಳು ಕಣ್ಮರೆಯಾಗುತ್ತಿವೆ. ಜಗತ್ತು ಎಷ್ಟೇ ಬದಲಾದರೂ ಮಾನವ ಸಂಬಂಧಗಳನ್ನು ಸುಭದ್ರಗೊಳಿಸುವುದೇ ನಿಜವಾದ ಗುರು ಧರ್ಮವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ವಿಜಯನಗರದ ಶ್ರೀ ಬಸವೇಶ್ವರ ಸುಜ್ಞಾನ ಮಂಟಪದಲ್ಲಿ ಶ್ರೀಮದ್ವೀರಶೈವ ಸದ್ಬೋಧನಾ ಸಂಸ್ಥೆ ಬೆಂಗಳೂರು ಜಿಲ್ಲಾ ಘಟಕದ ಆಶ್ರಯದಲ್ಲಿ ಜರುಗಿದ ಧರ್ಮೋತ್ತೇಜಕ ಸಂಗಮ ಸಮಾವೇಶದ 2ನೇ ದಿನದ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಸುಖ-ದುಃಖಗಳು ಹಗಲು ರಾತ್ರಿ ಇದ್ದಂತೆ. ಸುಖದಲ್ಲಿ ಹಿಗ್ಗದೇ, ಕಷ್ಟದಲ್ಲಿ ಕುಗ್ಗದೇ ಸಮಾನವಾಗಿ ಬದುಕುವ ಪ್ರವೃತ್ತಿ ನಮ್ಮದಾಗಬೇಕು. ಬೇರು ಇಲ್ಲದಿದ್ದರೆ ಮರ ಉಳಿಯುವುದಿಲ್ಲ. ಹಾಗೆಯೇ ನಂಬಿಕೆ, ಪರಸ್ಪರ ವಿಶ್ವಾಸ ಇಲ್ಲವಾದರೆ ಸಂಬಂಧಗಳು ಉಳಿಯುವುದಿಲ್ಲ. ಕರ್ಮವನ್ನು ಕಳೆದು ಧರ್ಮವನ್ನು ಬಿತ್ತಿ ಬದುಕನ್ನು ಬಂಗಾರಗೊಳಿಸಿದ ಶ್ರೇಯಸ್ಸು ಶ್ರೀ ಜಗದ್ಗುರು ರೇಣುಕಾಚಾರ್ಯರಿಗೆ ಸಲ್ಲುತ್ತದೆ. ಅಂಗ ಅವಗುಣಗಳನ್ನು ಪರಿಹರಿಸಿ ಸಾತ್ವಿಕ ಬದುಕಿಗೆ ಅವರು ಕೊಟ್ಟ ತತ್ವ-ಸಿದ್ಧಾಂತಗಳು ಸಕಲರ ಬಾಳಿಗೆ ಬೆಳಕು ತೋರುತ್ತವೆ ಎಂದರು.




ಮುಖ್ಯ ಅತಿಥಿಯಾಗಿ ಆಗಮಿಸಿದ ರಾಜ್ಯ ಬಿಜೆಪಿ ಅಧ್ಯಕ್ಷ ಶಿಕಾರಿಪುರ ಶಾಸಕ ಬಿ.ವೈ. ವಿಜಯೇಂದ್ರ ಮಾತನಾಡಿ, ಬದುಕಿನ ಹಾದಿಯಲ್ಲಿ ಕನಸುಗಳನ್ನು ಕೂಡಿಟ್ಟರೆ ಸಾಲದು. ಅದನ್ನು ನನಸು ಮಾಡಿಕೊಳ್ಳುವ ಮಾರ್ಗವನ್ನು ಕಂಡುಕೊಳ್ಳಬೇಕು. ಧರ್ಮವೆಂದರೆ ಬರೀ ನಂಬಿಕೆಯಲ್ಲ. ನಡತೆ ಬಹಳ ಮುಖ್ಯ. ವೀರಶೈವ ಧರ್ಮದಲ್ಲಿ ಸಂಸ್ಕಾರ ಮತ್ತು ಕಾಯಕ ಜೀವನಕ್ಕೆ ಹೆಚ್ಚು ಪ್ರಾಮುಖ್ಯತೆಯನ್ನು ಕೊಟ್ಟಿದೆ. ಶ್ರೀ ರಂಭಾಪುರಿ ಜಗದ್ಗುರುಗಳ ಧರ್ಮಯಜ್ಞ ಎಲ್ಲೆಡೆ ನಡೆಯುತ್ತಿರುವುದರಿಂದ ಆರೋಗ್ಯಪೂರ್ಣ ಸಮಾಜ ಸಂವರ್ಧನೆಗೆ ಹೆಚ್ಚು ಬಲ ದೊರಕುತ್ತಿರುವುದು ನಮ್ಮೆಲ್ಲರ ಸೌಭಾಗ್ಯವೆಂದರು.

ದೊಡ್ಡಗುಣಿ ರೇವಣಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳು ಪ್ರಾಸ್ತಾವಿಕ ಮಾತನಾಡಿ, ವ್ಯಕ್ತಿಗೆ ಕೊಳೆ ಅಂಟಿದರೆ ಶುದ್ಧ ಮಾಡಬಹುದು. ಆದರೆ ವ್ಯಕ್ತಿತ್ವವೇ ಕೊಳಕಾಗಿದ್ದರೆ ತೊಳೆಯುವುದು ಬಲು ಕಷ್ಟ. ಬದುಕು ಎಷ್ಟು ಶ್ರೀಮಂತವಾಗಿದೆ ಅನ್ನುವುದಕ್ಕಿಂತ ಎಷ್ಟು ನೆಮ್ಮದಿಯಾಗಿದೆ ಎಂಬುದು ಮುಖ್ಯ. ವೀರಶೈವ ಲಿಂಗಾಯತ ಧರ್ಮದಲ್ಲಿ ಸದ್ಗುಣ ಸಂಸ್ಕಾರದಿಂದ ಬಲು ಎತ್ತರಕ್ಕೆ ಬೆಳೆಯಲು ಅವಕಾಶ ಕಲ್ಪಿಸಿದೆ. ಶ್ರೀ ರಂಭಾಪುರಿ ಜಗದ್ಗುರುಗಳ ದೂರದರ್ಶಿತ್ವ ವಿಶಾಲ ಮನೋಭಾವನೆಗಳು ಜೀವ ಜಗತ್ತಿಗೆ ಬೆಳಕು ತೋರುತ್ತಿವೆ ಎಂದರು.

ಕಲ್ಲುಬಾಳು ಮಠದ ಶಿವಾನಂದ ಶಿವಾಚಾರ್ಯ ಸ್ವಾಮಿಗಳು ಸದಾಶಯ ನುಡಿ ಸಲ್ಲಿಸಿದರು. ಎಡೆಯೂರು, ಸಂಗೊಳ್ಳಿ, ಸಿದ್ಧರಬೆಟ್ಟ, ನಾಗಲಾಪುರ ಮಠದ ಶ್ರೀಗಳು ಉಪಸ್ಥಿತರಿದ್ದರು. ನಾಗಭೂಷಣ ಬಣಕಾರ ಇವರಿಂದ ಯೋಗಾಸನ ಪ್ರದರ್ಶನ ಜರುಗಿತು. ಕರ್ನಾಟಕ ವೀರಶೈವ ವಿದ್ಯಾಭಿವೃದ್ಧಿ ಸಮಿತಿ ಅಧ್ಯಕ್ಷ ಬಿ.ಎಸ್. ಪರಮಶಿವಯ್ಯ ಮುಖ್ಯ ಅತಿಥಿಗಳಾಗಿ ಆಗಮಿಸಿ ಮಾತನಾಡಿದರು.

ಪತ್ರಕರ್ತ ಪ್ರಶಾಂತ ರಿಪ್ಪನ್‌ಪೇಟೆ ಮಾತನಾಡಿ, ವೀರಶೈವ ಧರ್ಮದಲ್ಲಿ ಜೀವನ ವಿಕಾಸದ ಅಮೂಲ್ಯ ಸೂತ್ರಗಳು ಅಡಗಿವೆ. ಮನಸ್ಸು ಮತ್ತು ದೇಹ ಎರಡಕ್ಕೂ ಸಂಸ್ಕಾರ ಕೊಡುವ ಮಹತ್ಕಾರ್ಯ ಮಾಡುತ್ತಾ ಬಂದಿದೆ. 28 ಶಿವಾಗಮಗಳ ಸಾರವೇ ಸಿದ್ಧಾಂತ ಶಿಖಾಮಣಿಯಲ್ಲಿ ಅವ್ಯಕ್ತಗೊಂಡಿದೆ. ಜೀವನದ ಶ್ರೇಯಸ್ಸು ಧರ್ಮಾಚರಣೆಯಲ್ಲಿ ಅಡಗಿದೆ ಎಂಬ ಪರಮ ಸತ್ಯವನ್ನು ಅರ್ಥಪೂರ್ಣವಾಗಿ ಶ್ರೀ ಜಗದ್ಗುರು ರೇಣುಕಾಚಾರ್ಯರು ಪ್ರತಿಪಾದಿಸಿದ್ದಾರೆ. ಅವರ ಧಾರ್ಮಿಕ ಮತ್ತು ಸಾಮಾಜಿಕ ಸತ್ಕ್ರಾಂತಿ ಎಲ್ಲ ಕ್ರಾಂತಿಗಳ ಮೂಲ ಗಂಗೋತ್ರಿಯಾಗಿದೆ ಎಂದರು.

ಶಿವಶಂಕರ ಶಾಸ್ತ್ರಿಗಳಿಂದ ಪ್ರಾರ್ಥನಾ ಭಕ್ತಿಗೀತೆ ಜರುಗಿತು. ಶ್ರೀಮದ್ವೀರಶೈವ ಸದ್ಬೋಧನಾ ಸಂಸ್ಥೆ ಬೆಂಗಳೂರು ಜಿಲ್ಲಾ ಘಟಕದ ಅಧ್ಯಕ್ಷ ಬೀರೂರು ಶಿವಸ್ವಾಮಿ ಸ್ವಾಗತಿಸಿದರು. ಸಂಸ್ಥೆಯ ಸದಸ್ಯ ಚಂದ್ರಶೇಖರ ನಾಗರಾಳಮಠ ನಿರೂಪಿಸಿದರು. ಎಸ್.ಬಿ. ವಿಜಯಕುಮಾರ್ ಅನಿವಾಲ, ನಾಗರಾಜು, ಗುರುಲಿಂಗಸ್ವಾಮಿ, ಶರಣಗೌಡ ಪಾಟೀಲ, ಶಶಿಕುಮಾರ ಅನ್ನ ದಾಸೋಹ ಸೇವೆ ಸಲ್ಲಿಸಿದರು.

# ನಾಗಾವಿ ಗ್ರಾಮದಲ್ಲಿ ಶ್ರಾವಣ ಮಾಸದ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಶ್ರಾವಣ ಮಾಸ ಕಾರ್ಯಕ್ರಮ ನಿಮಿತ್ತ ತಾಲೂಕಿನ ನಾಗಾವಿ ಗ್ರಾಮದ ಕನ್ನೂರು ಬಸವೇಶ್ವರ ಕಲ್ಯಾಣ ಮಂಟಪದಲ್ಲಿ ಆ.8 ರಂದು ಕಲಬುರಗಿ ಶರಣಬಸವೇಶ್ವರ ಪುರಾಣವು ಆರಂಭಗೊಳ್ಳುವುದು. ಸೆ.3 ರಂದು ಪುರಾಣ ಮಂಗಳಗೊಳ್ಳುವುದು. ಶ್ರಾವಣ ಮಾಸದಲ್ಲಿ ಪ್ರತಿದಿನ ಬೆಳಗ್ಗೆ 7 ಗಂಟೆಗೆ ಕನ್ನೂರ ಬಸವೇಶ್ವರನಿಗೆ ಅಭಿಷೇಕ ಪೂಜೆ, ರಾತ್ರಿ 8 ಗಂಟೆಗೆ ಪುರಾಣ ಕಾರ್ಯಕ್ರಮ ಜರುಗುವುದು ಎಂದು ಪ್ರಕಟಣೆ ತಿಳಿಸಿದೆ.

# ಸತತ ಪ್ರಯತ್ನದಿಂದ ಯಶಸ್ಸು ಸಾಧ್ಯ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ವಿದ್ಯಾರ್ಥಿಗಳು ಸಮಯದ ಸದ್ಬಳಕೆ ಮಾಡಿಕೊಂಡು ಸತತ ಪ್ರಯತ್ನಶೀಲರಾದರೆ ಯಶಸ್ಸು ಕಟ್ಟಿಟ್ಟ ಬುತ್ತಿ ಎಂದು ಗದಗ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ ವಿಶ್ವವಿದ್ಯಾಲಯದ ಎನ್‌ಎಸ್‌ಎಸ್ ಸಂಯೋಜನಾಧಿಕಾರಿ ಪ್ರಶಾಂತ ಮೇರವಾಡೆ ಹೇಳಿದರು.

ಅವರು ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿಗಳ ಕಲಾ ಭವನದಲ್ಲಿ ಎಸ್‌ಜೆಜೆಎಂ ಸಂಯುಕ್ತ ಪದವಿಪೂರ್ವ ಮಾಹಾವಿದ್ಯಾಲಯದ 2024/25ನೇ ಸಾಲಿನ ಪಠ್ಯೇತರ ಚಟುವಟಿಕೆಗಳು, ಎನ್‌ಎಸ್‌ಎಸ್‌ನ ವಿವಿಧ ಸಾಂಘಿಕ ಚಟುವಟಿಕೆಗಳು ಹಾಗೂ ಪ್ರೊಜೆಕ್ಟರ್ ಕೊಠಡಿಯ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದರು.

ಮಕ್ಕಳು ಸರ್ವಾಂಗೀಣ ಅಭಿವೃದ್ಧಿ ಹೊಂದಬೇಕಾದರೆ ಪಠ್ಯದೊಂದಿಗೆ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸುವುದರಿಂದ ಮಾನಸಿಕ ಹಾಗೂ ದೈಹಿಕವಾಗಿ ಸದೃಢರಾಗಲು ಸಹಕಾರಿಯಾಗುತ್ತದೆ. ಸಮಾಜ ಸೇವೆಗಾಗಿ ಎನ್‌ಎಸ್‌ಎಸ್ ಶಿಬಿರ ಸಹಕಾರಿಯಾಗುವುದರಿಂದ ಪ್ರತಿಯೊಂದು ಚಟುವಟಿಕೆಗಳಲ್ಲಿ ಮಕ್ಕಳು ಬಾಗವಹಿಸಬೇಕು. ಇದರಿಂದ ಕೌಶಲ್ಯ, ವ್ಯಕ್ತಿತ್ವ, ಛಲ ಬೆಳವಣಿಗೆಯಾಗುವುದು ಎಂದರು.

ಅಧ್ಯಕ್ಷತೆ ವಹಿಸಿದ್ದ ಬಾಲಲೀಲಾ ಮಾಹಾಂತ ಶಿವಯೋಗಿ ಶಿಕ್ಷಣ ಸಮಿತಿಯ ಚೇರಮನ್ ಎಂ.ಡಿ. ಬಟ್ಟೂರ ಮಾತನಾಡಿ, ಮಕ್ಕಳ ಶೈಕ್ಷಣಿಕ ಬೆಳವಣಿಗೆಗಾಗಿ ಪ್ರೊಜೆಕ್ಟರ್ ಕೊಠಡಿ, ಉತ್ತಮ ಶಾಲಾ ಕೊಠಡಿಗಳು, ಗ್ರಂಥಾಲಯ, ವಿಶಾಲವಾದ ಆಟದ ಮೈದಾನ, ಕಂಪ್ಯೂಟರ್ ಶಿಕ್ಷಣ, ಉತ್ತಮ ಶಿಕ್ಷಕ ವೃಂದವನ್ನು ಹೊಂದಿದ್ದು, ಇವುಗಳನ್ನು ಮಕ್ಕಳು ಸದುಪಯೋಗ ಮಾಡಿಕೊಂಡು ಉತ್ತಮ ಭವಿಷ್ಯ ರೂಪಿಸಿಕೊಂಡು ಶಾಲೆಗೆ ಕೀರ್ತಿ ತನ್ನಿ ಎಂದರು.

ಉಪಾಧ್ಯಕ್ಷ ವಿ.ಎಸ್. ನೀಲಗುಂದ, ಡಾ. ಎಸ್.ಸಿ. ಚವಡಿ, ಪಿ.ಎ. ವಂಟಕರ, ಎನ್.ಆರ್. ದೇಶಪಾಂಡೆ, ಎಂ.ಎಂ. ಅದರಗುಂಚಿ, ಎಸ್.ಸಿ. ಕುರ್ತಕೋಟಿ, ಎಫ್.ಎಸ್. ಅಮೋಘಿಮಠ, ಎಂ.ಎಂ. ಬಡ್ನಿ, ಪ್ರಾಚಾರ್ಯ ಇ.ಎಂ. ಗುಳೆದಗುಡ್ಡ, ಎ.ಎಂ. ಅಂಗಡಿ, ವಿದ್ಯಾರ್ಥಿ ಪ್ರತಿನಿಧಿ ಗಂಗಮ್ಮಾ ಅವ್ವಣ್ಣವರ, ವ್ಹಿ.ಪಿ. ಪರಸಪ್ಪನವರ, ಸಾಗರ ಹೊರಕೇರಿ, ಡಿ.ಐ. ಅಣ್ಣಿಗೇರಿ, ಸಂಜನಾ ಪತ್ರಿ ಇದ್ದರು.

### ಗದಗ ಶಹರ ವಲಯದ ವಿಶೇಷ ಚೇತನ ಮಕ್ಕಳ ಪಾಲಕರ ಸಭೆ

# ಆರೋಗ್ಯ ಜಾಗೃತಿಯತ್ತ ಗಮನ ಹರಿಸಿ



■ವಿಜಯಸಾಕ್ಷಿ ಸುದ್ದಿ, ಗದಗ

ಶಾಲಾ ಸಿದ್ಧತಾ ಕೇಂದ್ರದಲ್ಲಿ ಅಂಗವಿಕಲ ಮಕ್ಕಳಿಗೆ ನ್ಯೂನತೆಯ ಅನುಸಾರ ತರಬೇತಿ ನೀಡಲಾಗುತ್ತಿದ್ದು, ಎಸ್‌ಆರ್‌ಪಿ ಕೇಂದ್ರಕ್ಕೆ ಮಕ್ಕಳನ್ನು ಕಳುಹಿಸಿ ಅದರ ಪ್ರಯೋಜನ ಪಡೆಯಬೇಕೆಂದು ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್. ಬುರಡಿ ಹೇಳಿದರು.

ಅವರು ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಹಾಗೂ ಬೆಂಗಳೂರಿನ ಪೋರ್ಥ್‌ವೇ ಪೌಂಡೇಶನ್ ನನಗೂ ಶಾಲೆ ಸಂಸ್ಥೆಯ ಸಹಯೋಗದಲ್ಲಿ ಗದಗ ಶಹರ ವಲಯದ ವಿಶೇಷ ಚೇತನ ಮಕ್ಕಳ ಪಾಲಕರ ಸಭೆಯಲ್ಲಿ ಮಾತನಾಡಿದರು.

ಬಾಲ್ಯ ಎಂಬುದು ಆಟ-ಪಾಠಗಳ ಸಂಗಮ. ಈ ಮಕ್ಕಳು ಆಟ-ಪಾಠದಿಂದ ವಂಚಿತರಾಗುತ್ತಿದ್ದು, ಪಾಲಕರು ಇವರ ಆರೋಗ್ಯ ಜಾಗೃತಿಯತ್ತ ಹೆಚ್ಚು ಗಮನ ಹರಿಸಿ ಅವರಲ್ಲಿ ಸ್ಫೂರ್ತಿ ತುಂಬಿದರೆ ಅವರೂ ಸಾಧನೆ ಮಾಡಬಲ್ಲರು ಎಂದರು.

ಪೋರ್ಥ್‌ವೇ ಗದಗ ಸಂಚಾಲಕ ಬಸವರಾಜ ಮ್ಯಾಗೇರಿ ಮಾತನಾಡಿ, ವಿಶೇಷ ಮಕ್ಕಳು ಸಾಮಾನ್ಯ ಮಕ್ಕಳಂತೆ ಆಗಬಲ್ಲರು. ಪಾಲಕರ ಶ್ರಮ ಇದರಲ್ಲಿ ಬಹಳಷ್ಟು ಇದೆ. ಪಾಲಕರು ಭರವಸೆಯೊಂದಿಗೆ ಕಾರ್ಯ ನಿರ್ವಹಿಸಬೇಕೆಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ, ಬಾಲ್ಯದಲ್ಲಿಯೇ ಇಂತಹ ಮಕ್ಕಳಿಗೆ ಸರಿಯಾದ ಜೀವನ ಕ್ರಮ ತಿಳಿಸಿಕೊಟ್ಟಲ್ಲಿ ಮುಂದೆ ಅವರು ಶೈಕ್ಷಣಿಕವಾಗಿಯೂ ಅಭಿವೃದ್ಧಿ ಹೊಂದಿ ಸಾಧನೆಯ ಮೆಟ್ಟಿಲೇರುವರು ಎಂದರು.

ಪೋರ್ಟ್‌ವೇದಿಂದ ಶಾಲಾ ಸಿದ್ಧತಾ ಕೇಂದ್ರಕ್ಕೆ ಬರುವ ಮಕ್ಕಳಿಗೆ ಟೀಶರ್ಟ್-ಪ್ಯಾಂಟ್ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಪಾಲಕರು, ಮಕ್ಕಳು ಪಾಲ್ಗೊಂಡಿದ್ದರು. ಎಸ್.ಸಿ. ಚಳಗೇರಿ ಸ್ವಾಗತಿಸಿ ವಂದಿಸಿದರು.

### ಡಯಾಲಿಸಿಸ್ ಕೇಂದ್ರ ಉದ್ಘಾಟಿಸಿದ ಶಾಸಕ ಡಾ. ಚಂದ್ರು ಲಮಾಣಿ

# ರೋಗಿಗಳ ಪಾಲಿಗೆ ವರದಾನ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕು ಕೇಂದ್ರದ ಆಸ್ಪತ್ರೆಗಳಲ್ಲಿ ಬಡವರಿಗೆ ಡಯಾಲಿಸಿಸ್ ಸೌಲಭ್ಯ ದೊರಕಿಸಿಕೊಡುವ ಸಲುವಾಗಿ ಈ ಸೇವೆಯನ್ನು ಆರಂಭಿಸಿದ್ದು, ಕೇಂದ್ರಕ್ಕೆ ಅಗತ್ಯವಿರುವ ಸೌಲಭ್ಯ ಹಾಗೂ ಸಿಬ್ಬಂದಿಯನ್ನು ಒದಗಿಸಲಾಗಿದೆ. ಅಗತ್ಯವಿರುವವರು ಇದರ ಸದುಪಯೋಗ ಮಾಡಿಕೊಂಡು ಆರೋಗ್ಯ ಸುಧಾರಿಸಿಕೊಳ್ಳಬೇಕು. ಆಸ್ಪತ್ರೆಯನ್ನು ಶುಚಿಯಾಗಿಡುವದರೊಂದಿಗೆ ರೋಗಿಗಳಿಗೆ ಸ್ಪಂದಿಸಿ ಚಿಕಿತ್ಸೆ ನೀಡಬೇಕು ಎಂದು ಶಾಸಕ ಡಾ.ಚಂದ್ರು ಲಮಾಣಿ ಹೇಳಿದರು.

ಅವರು ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ನ್ಯಾಷನಲ್ ಹೆಲ್ತ್ ಮಿಷನ್(ಎನ್‌ಎಚ್‌ಎಂ) ಅಡಿ ಪಬ್ಲಿಕ್ ಪ್ರೈವೇಟ್ ಸಹಭಾಗಿತ್ವ (ಪಿಪಿಪಿ), ಡಿಸಿಡಿಸಿ ಹೆಲ್ತ್ ಸರ್ವಿಸ್ ಪ್ರೈವೇಟ್ ಲಿಮಿಟೆಡ್ (ಕಿಡ್ನಿ ಕೇರ್) ಸಹಯೋಗದಲ್ಲಿ 2 ಬೆಡ್‌ಗಳ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಡಯಾಲಿಸಿಸ್ ಕೇಂದ್ರವನ್ನು ಶನಿವಾರ ಉದ್ಘಾಟಿಸಿ ಮಾತನಾಡಿದರು.

ತಾಲೂಕಿನಲ್ಲಿ ಮೂತ್ರಕೋಶದ ತೊಂದರೆಯಿಂದ ಬಳಲುತ್ತಿರುವ ಬಡ ರೋಗಿಗಳಿಗೆ ಈ ಕೇಂದ್ರ ಹೆಚ್ಚು ಅನುಕೂಲವಾಗಲಿದೆ. ಡಯಾಲಿಸಿಸ್ ಕೇಂದ್ರ ಆರಂಭಗೊಂಡಿರುವದರಿಂದ ಮೂತ್ರಕೋಶ (ಕಿಡ್ನಿ)ದ ಸಮಸ್ಯೆಯಿಂದ ಬಳಲುತ್ತಿರುವ ಬಡ ರೋಗಿಗಳ ಪಾಲಿಗೆ ವರದಾನವಾಗಲಿದೆ.



ಕಿಡ್ನಿ ಸಮಸ್ಯೆಯಿಂದ ಬಳಲುವ ರೋಗಿಗಳಿಗೆ ವಾರದಲ್ಲಿ 2ರಿಂದ 3 ಬಾರಿ ಡಯಾಲಿಸಿಸ್ ಮಾಡಬೇಕಾಗುತ್ತದೆ. ಅದಕ್ಕಾಗಿ ಹುಬ್ಬಳ್ಳಿ, ಗದಗಕ್ಕೆ ಹೋಗಬೇಕಾಗಿತ್ತು. ಇತ್ತೀಚೆಗೆ ಶಿರಹಟ್ಟಿಯಲ್ಲಿಯೂ ಘಟಕ ಪ್ರಾರಂಭವಾಗಿತ್ತು. ಈಗ ಲಕ್ಷೇಶ್ವರ ಆಸ್ಪತ್ರೆಯಲ್ಲಿ ಈ ಸೌಲಭ್ಯ ಲಭಿಸುತ್ತಿರುವುದು ಕುಂದಗೋಳ, ಸವಣೂರು, ಶಿಗ್ಗಾಂವಿ, ಶಿರಹಟ್ಟಿ ತಾಲೂಕಿನ ಜನರಿಗೆ ಅನುಕೂಲವಾಗಲಿದೆ ಎಂದರು.

ಇತ್ತಿಚೀನ ದಿನಗಳಲ್ಲಿ ಕಂಡುಬರುತ್ತಿರುವ ಡೆಂಘೀ ಜ್ವರದ ಸಮಸ್ಯೆಯಿಂದ ಸಾಕಷ್ಟು ಜನರು ಬಳಲುವಂತಾಗಿರುವದಕ್ಕೆ ನಮ್ಮ ಸುತ್ತಮುತ್ತಲಿನ ಪರಿಸರ ಸ್ವಚ್ಛವಾಗಿಟ್ಟುಕೊಳ್ಳದಿರುವದು ಮುಖ್ಯ ಕಾರಣವಾಗಿದೆ. ಅದಕ್ಕಾಗಿ ಜನರು ಆರೋಗ್ಯದ ಕಡೆಗೆ ಹೆಚ್ಚು ಗಮನಹರಿಸುವದರ ಜೊತೆಗೆ ಸಣ್ಣ ಪುಟ್ಟ ಆರೋಗ್ಯ ಸಮಸ್ಯೆಗೆ ವೈದ್ಯರನ್ನು ಸಂಪರ್ಕಿಸಿ ಚಿಕಿತ್ಸೆ ಪಡೆದುಕೊಳ್ಳಿ ಎಂದು ಕರೆನೀಡಿದರು.

ತಹಸೀಲ್ದಾರ ವಾಸುದೇವ ಎಂ.ಸ್ವಾಮಿ ಮಾತನಾಡಿ, ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಡಯಾಲಿಸಿಸ್ ಚಿಕಿತ್ಸೆ ಸಿಗಬೇಕೆಂಬ ಕೂಗು ಬಹಳ ದಿನಗಳಿಂದ ಇತ್ತು. ಸರ್ಕಾರ ಬಡರೋಗಿಗಳ ಆರೋಗ್ಯ ಸೇವೆಗಾಗಿ ಎಲ್ಲ ಸರ್ಕಾರಿ ಆಸ್ಪತ್ರೆಗಳಲ್ಲಿಯೂ ಡಯಾಲಿಸಿಸ್ ಕೇಂದ್ರ ಕಲ್ಪಿಸಿದೆ. ಲಕ್ಷೇಶ್ವರದಲ್ಲಿಯೂ ಈ ಸೇವೆ ಲಭಿಸುವಲ್ಲಿ ಶಾಸಕರು ಮತ್ತು ವೈದ್ಯರ ಪಾತ್ರ ಮಹತ್ವದ್ದಾಗಿದೆ. ರೋಗಿಗಳು ಇದರ ಸದುಪಯೋಗ ಪಡೆಯಬೇಕು ಎಂದರು.

> ಅತ್ಯಾಧುನಿಕ ಯಂತ್ರೋಪಕರಣಗಳ ಕೇಂದ್ರ ಸ್ಥಾಪಿಸಲಾಗಿದೆ. ಬೆಳಿಗ್ಗೆ 8ರಿಂದ ಸಂಜೆ 4ರ ತನಕ ಕಾರ್ಯನಿರ್ವಹಿಸಲಿದೆ. ದಿನಕ್ಕೆ 4 ರೋಗಿಗಳಿಗೆ ಡಯಾಲಿಸಿಸ್ ಮಾಡಬಹುದು. ರೋಗಿಗಳ ಆರೋಗ್ಯದ ಸ್ಥಿತಿಗತಿಗೆ ಅನುಗುಣವಾಗಿ ಹೆಚ್ಚುವರಿ ಚಿಕಿತ್ಸೆಯೂ ದೊರೆಯಲಿದೆ. 2 ಸಾವಿರ ರೂ. ಮೌಲ್ಯದ ಚುಚ್ಚುಮದ್ದು ಸೇರಿ ಡಯಾಲಿಸಿಸ್ ಚಿಕಿತ್ಸೆ ಉಚಿತವಾಗಿದೆ.
>
> **– ಸಿದ್ದಲಿಂಗೇಶ್ವರ ಶಿವಶಿಂಪಿಗೇರ. ಡಯಾಲಿಸಿಸ್ ಕೇಂದ್ರದ ಆಡಳಿತಾಧಿಕಾರಿ.**


ಕಾರ್ಯಕ್ರಮದಲ್ಲಿ ಆಸ್ಪತ್ರೆ ಆಡಳಿತ ಅಧಿಕಾರಿ ಡಾ.ಶ್ರೀಕಾಂತ ಕಾಟೆವಾಲೆ, ಡಾ. ಗುರುರಾಜ ಕುಡಗಿ, ಡಾ. ಉಮೇಶ ಕೆಳಗಿನಮನಿ, ಡಾ. ಪ್ರವೀಣ ಸಜ್ಜನ, ಶಿರಹಟ್ಟಿ ಮಂಡಳದ ಬಿಜೆಪಿ ಅಧ್ಯಕ್ಷ ಸುನೀಲ ಮಹಾಂತೇಶೆಟ್ಟರ, ನಗರ ಬಿಜೆಪಿ ಅಧ್ಯಕ್ಷ ನವೀನ ಬೆಳ್ಳಟ್ಟಿ, ವಿಜಯ ಮೆಕ್ಕಿ, ಲಂಕೆಪ್ಪ ಶೆರಸೂರಿ, ವಾಸಣ್ಣ ಪಾಟೀಲ್, ಗಿರೀಶ ಚೌರಡ್ಡಿ, ತಿಮ್ಮರೆಡ್ಡಿ ಮರಡ್ಡಿ, ಡಾ. ಕುಮಾರಸ್ವಾಮಿ ಹಿರೇಮಠ, ಬಸವರಾಜ ಚಕ್ರಸಾಲಿ, ಅನಿಲ ಮುಳುಗುಂದ, ಫಕ್ಕೀರೇಶ ಅಣ್ಣಿಗೇರಿ, ಮಂಜುನಾಥ ಗಜಾಕೋಶ, ನವೀನ ಕುಂಬಾರ, ಮಂಜುನಾಥ ಗೊರವರ, ಆಸ್ಪತ್ರೆ ಸಿಬ್ಬಂದಿಗಳು, ಸಾರ್ವಜನಿಕರು ಇದ್ದರು.

# ಕಾರ್ಗಿಲ್ ವಿಜಯೋತ್ಸವ: ಬಿಜೆಪಿಯಿಂದ ಪಂಜಿನ ಮೆರವಣಿಗೆ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ ಗದಗ ನಗರ ಯುವ ಮೋರ್ಚಾ ಅಧ್ಯಕ್ಷ ವೆಂಕಟೇಶ ಹಬೀಬ ಅವರ ನೇತೃತ್ವದಲ್ಲಿ 25ನೇ ವರ್ಷದ ಕಾರ್ಗಿಲ್ ವಿಜಯೋತ್ಸವದ ನಿಮಿತ್ತ ಪಂಜಿನ ಮೆರವಣಿಗೆ ಜರುಗಿತು. ಈ ಸಂದರ್ಭದಲ್ಲಿ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ರಾಜು ಕುರುಡಗಿ ಮಾತನಾಡಿ, ಕಾರ್ಗಿಲ್ ಯುದ್ಧದಲ್ಲಿ ಭಾರತ ದೇಶದ ಹೆಮ್ಮೆಯ ಯೋಧರು ತಮ್ಮ ಪ್ರಾಣವನ್ನು ಪಣಕ್ಕಿಟ್ಟು ಯುದ್ಧವನ್ನು ಗೆದ್ದಿದ್ದಾರೆ ಎಂದರು.

ಬಿಜೆಪಿ ಹಿರಿಯರಾದ ಎಂ.ಎಸ್. ಕರಿಗೌಡ್ರ ಮಾತನಾಡಿ, ನಮ್ಮ ಹೆಮ್ಮೆಯ ಸೈನಿಕರು ಹಾಗೂ ಅಂದಿನ ಪ್ರಧಾನಮಂತ್ರಿಗಳಾದ ಅಟಲ್‌ಬಿಹಾರಿ ವಾಜಪೇಯಿಯವರು ದೇಶದ ಒಳಿತಿಗಾಗಿ ತೆಗೆದುಕೊಂಡ ನಿರ್ಣಯ ಕಾರ್ಗಿಲ್ ಯುದ್ಧ ಗೆಲ್ಲುವ ಹಾಗೆ ಮಾಡಿತು ಎಂದು ತಿಳಿಸಿ ಯುದ್ಧದಲ್ಲಿ ಮಡಿದ ವೀರ ಯೋಧರಿಗೆ ಶ್ರದ್ಧಾಂಜಲಿ ಅರ್ಪಿಸಿದರು.




ಗದಗ ಜಿಲ್ಲಾ ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ಸಂತೋಷ ಅಕ್ಕಿ ಮಾತನಾಡಿದರು. ಈ ಸಂದರ್ಭದಲ್ಲಿ ಬಿಜೆಪಿ ಗದಗ ನಗರ ಅಧ್ಯಕ್ಷ ಅನಿಲ ಅಬ್ಬಿಗೇರಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ, ನವೀನ ಕೊಟೆಕಲ್, ರಾಹುಲ್ ಸಂಕಣ್ಣವರ, ಶ್ರೀಪತಿ ಉಡುಪಿ, ಬಿ.ಎಚ್. ಲದ್ವಾ, ವಂದನಾ ವರ್ಣೇಕರ, ಕೌಶಲ್ಯ ಬದಿ, ಇರ್ಷಾದ ಮಾನ್ವಿ, ರತ್ನಾ ಕುರಗೋಡ, ದೇವಪ್ಪ ಗೊಟೂರ, ಪ್ರಕೋಷ್ಠಗಳ ಸಂಯೋಜಕ ಶಶಿಧರ ದಿಂಡೂರ, ಕಾರ್ತಿಕ ಶಿಗ್ಲಿಮಠ, ಕಾರ್ತಿಕ ಮುತ್ತಿನಪೆಂಡಿಮಠ, ವಿಶ್ವನಾಥ ಶಿರಿಗಣ್ಣವರ, ಅಪ್ಪಣ್ಣ ಟೆಂಗಿನಕಾಯಿ, ಶಿವು ಹಿರೇಮನಿಪಾಟೀಲ, ಮಂಜುನಾಥ ತಳವಾರ, ವಿನಾಯಕ ಹೊರಕೇರಿ, ಕೇಶವ ಕೊಟ್ನೆಕಲ್, ಸಾಗರ ಪಾಪನಾಳ, ಬಸವರಾಜ ನರೇಗಲ್, ರಾಹುಲ ಅರಳಿ, ವಿರೇಶಪ್ರಭು ಗದಗಿನ್, ರವಿ ಚವ್ಹಾಣ, ಅವಿನಾಶ ಹೊನಗುಡಿ ಸೇರಿದಂತೆ ಬಿಜೆಪಿ ಯುವ ಮೋರ್ಚಾ ಕಾರ್ಯಕರ್ತರು ಭಾಗಿಯಾಗಿದ್ದರು.

# ಸಂಗೀತ ಪರೀಕ್ಷೆ ಗದುಗಿನಲ್ಲಿ ನಡೆಸಿ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವೀರೇಶ್ವರ ಪುಣ್ಯಾಶ್ರಮ ಬಡ ಮಕ್ಕಳಿಗೆ ಉಚಿತವಾಗಿ ಸಂಗೀತ ಕಲಿಸಿ, ದೇಶ-ವಿದೇಶ ದಲ್ಲಿ ನಮ್ಮ ನಾಡಿನ ಕೀರ್ತಿ ಹೆಚ್ಚಿಸಿದೆ. ಈಗ ಸಂಗೀತ ವಿಶ್ವವಿದ್ಯಾಲಯದ ಕುಲಪತಿಗಳು ಗದಗದಲ್ಲಿ ನಡೆಯುವ ಸಂಗೀತ ಪರೀಕ್ಷಾ ಕೇಂದ್ರವನ್ನು ಹುಬ್ಬಳ್ಳಿಗೆ ಸ್ಥಳಾಂತರಿಸಿರುವುದನ್ನು ಸೋಮು ಚರೇದ ಹಾಗೂ ಬೆಳವಣಕಿ ಗ್ರಾಮದ ವೀರೇಶ್ವರ ಪುಣ್ಯಾಶ್ರಮದ ಭಕ್ತರು ಖಂಡಿಸಿದ್ದಾರೆ.

ಹೆಚ್ಚಿನ ವಿದ್ಯಾರ್ಥಿಗಳು ಅಂಧ, ಅನಾಥರಿದ್ದು, ಪರೀಕ್ಷೆ ಬರೆಯಲು, ಸಂಗೀತ ಪರಿಕರ ತೆಗೆದುಕೊಂಡು ಹೋಗುವದು ಸಮಸ್ಯೆಯಾಗುತ್ತದೆ. ಸರಕಾರ ಕೂಡಲೇ ಸ್ಥಳಾತಂರಿಸಿರುವ ಸಂಗೀತ ಪರೀಕ್ಷಾ ಕೇಂದ್ರವನ್ನು ಮೊದಲಿನಂತೆ ಗದಗ ನಗರಕ್ಕೆ ವರ್ಗಾವಣೆ ಮಾಡಬೇಕು ಎಂದು ಆಗ್ರಹಿಸಿದ್ದಾರೆ.

# ಸರಗಳ್ಳರ ಬಂಧನ



■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ತಾಲೂಕಿನ ಕೋಡಿಹಳ್ಳಿ ಕ್ರಾಸ್ ಸಮೀಪದ ನಂದಿ ರೆಸಾರ್ಟ್‌ನ ಕಾಫಿ ಸ್ಟಾಲ್‌ನಲ್ಲಿ ಚಾಕಲೇಟ್ ಕೇಳುವ ನೆಪದಲ್ಲಿ ಮಾಂಗಲ್ಯ ಸರ ಕಿತ್ತುಕೊಂಡು ಪರಾರಿಯಾಗಿದ್ದ ಖದೀಮರನ್ನು ಪೊಲೀಸರು ಬಂಧಿಸಿದ್ದಾರೆ.

ಅಂಗಡಿಯೊಳಗೆ ಕುಳಿತಿದ್ದ ಮಹಿಳೆಯೊಬ್ಬರ ಮಾಂಗಲ್ಯ ಸರವನ್ನು ಗಮನಿಸಿದ ಚೈತ್ರ (31) ಕೇಶವನಾಯ್ಕ (38) ಚಾಕಲೇಟ್ ಕೇಳುವ ನೆಪದಲ್ಲಿ ಕಿತ್ತುಕೊಂಡು ಬೈಕ್ ಹತ್ತಿ ಪರಾರಿಯಾಗಲು ಯತ್ನಿಸಿದಾಗ, ಸಂತ್ರಸ್ತ ಮಹಿಳೆ ತಡೆಯಲು ಮುಂದಾಗಿದ್ದರು. ಆಗ ಆರೋಪಿಗಳು ನಕಲಿ ಗನ್ ತೋರಿಸಿ ಪರಾರಿಯಾಗಿದ್ದರು.

ಕೂಡಲೇ ಹರಪನಹಳ್ಳಿ ಪೊಲೀಸ್ ಠಾಣೆಗೆ ತೆರಳಿ ರೆಸಾರ್ಟ್ ಮಾಲಿಕರು ಘಟನೆಯನ್ನು ವಿವರಿಸಿದಾಗ, ಸಿಪಿಐ ನಾಗರಾಜ್ ಕಮ್ಮಾರ ನೇತೃತ್ವದಲ್ಲಿ 3 ತಂಡಗಳನ್ನು ರಚಿಸಿ, ಹಡಗಲಿ ತಾಲೂಕು ಅಡವಿಮಲ್ಲನಕೇರಿ ಹತ್ತಿರ ಆರೋಪಿಗಳನ್ನು ಘಟನೆ ನಡೆದ 3 ಗಂಟೆಯ ಒಳಗಡೆ ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಬಂಧಿತರು ಹೂವಿನ ಹಡಗಲಿ ತಾಲೂಕಿನ ಅಡವಿಮಲ್ಲನಕೇರಿ ತಾಂಡದವರಾಗಿದ್ದು, ಅವರಿಂದ ಮಾಂಗಲ್ಯ ಸರ, ಎರಡು ನಕಲಿ ಗನ್, ಒಂದು ಪಲ್ಸರ್ ಬೈಕ್, ಮೂರು ಮೊಬೈಲ್ ಫೋನ್, ಎರಡು ಜರ್ಕಿನ್ ವಶಪಡಿಸಿಕೊಂಡಿದ್ದಾರೆ. ಕಾರ್ಯಚರಣೆಲ್ಲಿ ಯಶಸ್ವಿಯಾದ ಸಿಪಿಐ ನಾಗರಾಜ್ ಕಮ್ಮಾರ ತಂಡವನ್ನು ವಿಜಯನಗರ ಜಿಲ್ಲಾ ಎಸ್ಪಿ ಹರೀಶ್ ಬಾಬು ಶ್ಲಾಘಿಸಿದ್ದಾರೆ.

ಡಿವೈಎಸ್ಪಿ ವೆಂಕಟಪ್ಪ ನಾಯಕ, ಎಸ್‌ಐ ವಸಂತಪ್ಪ, ಪಿಎಸ್‌ಐ ಶಂಭುಲಿಂಗಯ್ಯ ಎಸ್.ಹಿರೇಮಠ ಹಾಗೂ ಪೊಲೀಸ್ ಸಿಬ್ಬಂದಿಗಳಿದ್ದರು.


### ಜಿಲ್ಲಾ ಮಾಜಿ ಸೈನಿಕರ, ಪ್ಯಾರಾಮಿಲಿಟರಿ ಸಂಘದಿಂದ ಕಾರ್ಗಿಲ್ ವಿಜಯೋತ್ಸವ

# ವೀರ ಯೋಧರಿಗೆ ಗೌರವ ನಮನ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಮಾಜಿ ಸೈನಿಕರ ಸಂಘ, ಮಾಜಿ ಹಾಗೂ ಹಾಲಿ ಪ್ಯಾರಾಮಿಲಿಟರಿ ಯೋಧರ ಕಲ್ಯಾಣ ಸಂಘದ ಸಹಯೋಗದೊಂದಿಗೆ 25ನೇ ಕಾರ್ಗಿಲ್ ವಿಜಯೋತ್ಸವದ ರಜತ ಮಹೋತ್ಸವ ಹಾಗೂ ಯುದ್ಧದಲ್ಲಿ ಹುತಾತ್ಮ ವೀರ ಯೋಧರಿಗೆ ಗೌರವ ನಮನ ಕಾರ್ಯಕ್ರಮ ಗದುಗಿನಲ್ಲಿ ಜರುಗಿತು.

ಕಳಸಾಪೂರ-ಸೊರಟೂರ-ಮಲ್ಲಸಮುದ್ರದ ಓಂಕಾರೇಶ್ವರ ಹಿರೇಮಠದ ಪೂಜ್ಯ ಫಕೀರೇಶ್ವರ ಪಟ್ಟಾಧ್ಯಕ್ಷರು, ಜಿಲ್ಲಾ ನಿವೃತ್ತರ ಸಂಘದ ಅಧ್ಯಕ್ಷ ಕೆ.ಎಚ್. ಬೇಲೂರ, ಗದಗ ಜಿಲ್ಲಾ ಮಾಜಿ ಸೈನಿಕರ ಸಂಘದ ಅಧ್ಯಕ್ಷ ಗೂಳಯ್ಯ ಮಾಲಗಿತ್ತಿಮಠ, ಮಾಜಿ ಮತ್ತು ಹಾಲಿ ಪ್ಯಾರಾಮಿಲಿಟರಿ ಯೋಧರ ಕಲ್ಯಾಣ ಸಂಘದ ಜಿಲ್ಲಾ ಅಧ್ಯಕ್ಷ ನಾಗರಾಜ ಕುಂದರಗಿ, ಗದಗ ಜಿಲ್ಲಾ ಮಾಜಿ ಸೈನಿಕರ ಸಂಘದ ಮಾಜಿ ಅಧ್ಯಕ್ಷರೂ ಹಾಲಿ ಗೌರವ ಅಧ್ಯಕ್ಷರೂ ಆದ ಅಂದಾನಪ್ಪ ಯರಗೇರಿ, ಮಾಜಿ ಮತ್ತು ಹಾಲಿ ಪ್ಯಾರಾಮಿಲಿಟರಿ ಯೋಧರ ಕಲ್ಯಾಣ ಸಂಘದ ಗೌರವ ಅಧ್ಯಕ್ಷ ವ್ಹಿ.ಎಸ್. ಅಕ್ಕಿ ಉಭಯ ಸಂಘಟನೆಗಳ ಕಾರ್ಯದರ್ಶಿಗಳಾದ ಸಿ.ಜಿ. ಸೊನ್ನದ ಹಾಗೂ ಬಸಯ್ಯ ಹಿರೇಮಠ, ಮಾಜಿ ಯೋಧರು ಹಾಗೂ ವೀರನಾರಿಯರು ಸೇರಿದಂತೆ ಎನ್.ಸಿ.ಸಿ ಅಧಿಕಾರಿಗಳು, ಎನ್.ಸಿ.ಸಿ ಕೆಡೆಟ್‌ಗಳು ಪಾಲ್ಗೊಂಡಿದ್ದರು.



ಮಹಾತ್ಮ ಗಾಂಧಿ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಯುದ್ಧದಲ್ಲಿ ಹುತಾತ್ಮ ವೀರ ಯೋಧರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡುವ ಮೂಲಕ ಗೌರವ ನಮನ ಸಲ್ಲಿಸಲಾಯಿತು. ನಂತರ ಗಾಂಧಿ ಸರ್ಕಲ್‌ನಿಂದ ಆರಂಭಗೊಂಡ ಮೆರವಣಿಗೆಯು ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಕರ್ನಾಟಕ ರಾಜ್ಯ ಗದಗ ಜಿಲ್ಲಾ ನಿವೃತ್ತರ ಸಂಘದ ಕಾರ್ಯಾಲಯ ತಲುಪಿ ಸಮಾರಂಭ ಜರುಗಿತು.

# ಕಾಲೇಜು ಸಂಸತ್ ಚುನಾವಣೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಶುಕ್ರವಾರ ಮತದಾರರ ಸಾಕ್ಷರತಾ ಸಂಘದ ಅಡಿಯಲ್ಲಿ 2024-25ನೇ ಸಾಲಿನ ಕಾಲೇಜು ಸಂಸತ್ ಚುನಾವಣೆಯನ್ನು ನಡೆಸಲಾಯಿತು. ಎಲ್ಲ ವಿದ್ಯಾರ್ಥಿಗಳು ಉತ್ಸಾಹದಿಂದ ಪಾಲ್ಗೊಂಡು, ತಮ್ಮ ಕಾಲೇಜಿನ ಪ್ರತಿನಿಧಿಗಳನ್ನು ಪ್ರಜಾಸತ್ತಾತ್ಮಕ ಮಾದರಿಯಲ್ಲಿ ಮತದಾನ ಮಾಡುವ ಮೂಲಕ ಆಯ್ಕೆ ಮಾಡಿದ್ದು ಗಮನ ಸೆಳೆಯಿತು.

ಭವಿಷ್ಯದ ಮತದಾರರಿಗಾಗಿ ನಿಯಮಬದ್ಧ ಪ್ರಾತ್ಯಕ್ಷಿಕೆಯ



ಚುನಾವಣೆ ಪ್ರಕ್ರಿಯೆ ನಡೆಸಲಾಯಿತು. ಕಾಲೇಜು ಚುನಾವಣಾ ಆಯೋಗವನ್ನು ರಚಿಸಿಕೊಂಡು ಅಧಿಸೂಚನೆ ಹೊರಡಿಸುವ ಮೂಲಕ ನಾಮಪತ್ರ ಸಲ್ಲಿಕೆ, ನಾಮಪತ್ರಗಳ ಪರಿಶೀಲನೆ, ನಾಮಪತ್ರ ಹಿಂಪಡೆಯುವುದು, ಚಿಹ್ನೆಗಳ ಹಂಚಿಕೆ, ಪ್ರಚಾರದ ವೈಖರಿ ಮುಂತಾದ ಚುನಾವಣೆ ಪ್ರಕ್ರಿಯೆಗಳ ಬಗ್ಗೆ ವಿದ್ಯಾರ್ಥಿಗಳಿಗೆ ಮನನ ಮಾಡಿಕೊಡಲಾಯಿತು.

ವೀಕ್ಷಕರಾಗಿ ತಾಲೂಕ ತಹಸೀಲ್ದಾರ ವಾಸುದೇವಸ್ವಾಮಿ ಆಗಮಿಸಿ ಎಲ್ಲ ಪ್ರಕ್ರಿಯೆಗಳನ್ನು ಕಂಡು ಎಲ್ಲಾ ವಿದ್ಯಾರ್ಥಿಗಳಿಗೆ ಚುನಾವಣಾ ಪ್ರಕ್ರಿಯೆಗಳ ಬಗ್ಗೆ ಸಂವಾದ ನಡೆಸಿದರು. ಈ ಎಲ್ಲ ಚುನಾವಣೆಯ ಪ್ರಕ್ರಿಯೆ ಉಪನ್ಯಾಸಕ ಮಂಜುನಾಥ್ ಕೊಕ್ಕರಗುಂದಿ ನೇತೃತ್ವದಲ್ಲಿ ನಡೆಯಿತು. ಪ್ರಾಚಾರ್ಯ ಕುಬೇರಪ್ಪ ಶಿದ್ರಾಮಣ್ಣನವರ, ಉಪನ್ಯಾಸಕರಾದ ಭಾಗ್ಯಲಕ್ಷ್ಮೀ ಜೆ, ವಿನಾಯಕ ವೇತಾಳ, ನಾಗಪ್ಪ ಸಾತಪುತೆ, ಬಸವರಾಜ್ ದೊಡ್ಡಮನಿ ಪರಮೇಶ್ವರ ಲಮಾಣಿ, ರುದ್ರೇಶ್ ಬಡಿಗೇರ, ಎಸ್. ಎಫ್. ಹೂಗಾರ, ಸದಾನಂದ ನಡುವಿನಮನಿ, ರವಿ ಹೊನ್ನತ್ತಿ ಶೋಭಾ, ಸುರೇಖಾ ಅಂಗಡಿ ಇವರೆಲ್ಲರ ಮಾರ್ಗದರ್ಶನದಲ್ಲಿ ಯಶಸ್ವಿಯಾಗಿ ನೆರವೇರಿಸಲಾಯಿತು.

# "ಗೋರಂಟಿ" ಗೆ ಯುಗಳ ಗೀತೆ ಧ್ವನಿ ಮುದ್ರಣ



■ವಿಜಯಸಾಕ್ಷಿ ಸುದ್ದಿ, ಬೆಂಗಳೂರ

ರಾವಲ್ ಸಿನಿ ಫೋಕಸ್ ಅರ್ಪಿಸುವ "ಗೋರಂಟಿ" ಬಹುಭಾಷಾ ಸಿನೆಮಾದ ಯುಗಳ ಗೀತೆ ಧ್ವನಿ ಮುದ್ರಣ ಬೆಂಗಳೂರಿನ ಹಾರ್ಮೋನಿಕ್ ನೇಶನ್ ಸ್ಟುಡಿಯೋದಲ್ಲಿ ನಡೆಯಿತು.

"ಸಾಗಬೇಡ ಕಾಲ" ಎಂಬ ಸುಂದರ ಯುಗಳ ಗೀತೆಯನ್ನು ಹಿನ್ನೆಲೆ ಗಾಯಕಿ ಅನುರಾಧಾ ಭಟ್ ಹಾಡಿದರು. ಚಿತ್ರದಲ್ಲಿ ಒಟ್ಟು ಐದು ಹಾಡುಗಳಿವೆ. ಸಂಗೀತ ನಿರ್ದೇಶಕರಾದ ವಿಕಾಸರಜತ್, ಸಾಹಿತಿ ಮನ್ವರ್ಷಿ ನವಲಗುಂದ ಹಾಗೂ ಚಿತ್ರದ ನಿರ್ದೇಶಕರಾದ ಮಹೇಶ್ ರಾವಲ್ ಮತ್ತು ಗೋರಂಟಿ ಚಿತ್ರ ತಂಡದ ಸದಸ್ಯರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka